Volume : 9 | Issue : 145 | August : 22 : 2026 : Saturday
ಸಂಪುಟ : 9 | ಸಂಚಿಕೆ : 145 | ಆಗಸ್ಟ್ : 22 : 2026 : ಶನಿವಾರ



www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481

‘ಟಾಕ್ಸಿಕ್’ ಬಳಿಕ ಕಿಯಾರಾ ಅಡ್ವಾಣಿ ಹೊಸ ಸಿನಿಮಾಕ್ಕೆ ಸಹಿ ಹಾಕಿದ್ದಾರೆ. ನಿರ್ದೇಶಕಿ ಕನ್ನಿಕಾ ಡಿಲ್ಲೋನ್ ಅವರ ಚೊಚ್ಚಲ ನಿರ್ದೇಶನದಲ್ಲಿ ಸೈಫ್ ಅಲಿ ಖಾನ್ ಜೊತೆ ಕಿಯಾರಾ ತೆರೆ ಹಂಚಿಕೊಳ್ಳಲಿದ್ದಾರೆ.

ಇಂದು ‘ನೂಪುರ ನರ್ತನ’ ನೃತ್ಯೋತ್ಸವ ಪುಟ 2

‘ಸರ್ಕಾರದ ಆದಾಯ ಹೆಚ್ಚಳಕ್ಕೆ ಸಲಹೆ ನೀಡಿ’ ಪುಟ 4

■ ಸುದ್ದಿ ಚುಟುಕು

## ರಾಹುಲ್ ಧರಣಿ ಬಳಿಕ ಪೆಲೆಟ್ ಗನ್ ಬಳಕೆ ವಿರುದ್ಧ ಎಫ್‌ಐಆರ್

● ವಿಕ್ರಮ ವಾಹಿನಿ । ನವದೆಹಲಿ

ನೀಟ್ ಅಕ್ರಮಗಳ ವಿರುದ್ಧದ ಪ್ರತಿಭಟನೆ ವೇಳೆ ವಿದ್ಯಾರ್ಥಿಯೊಬ್ಬನ ಮೇಲೆ ಪೆಲೆಟ್ ಗನ್ ಬಳಸಿದ ಆರೋಪಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಎಫ್‌ಐಆರ್ ದಾಖಲಿಸುವಂತೆ ಒತ್ತಾಯಿಸಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಗಾಯಗೊಂಡ ವಿದ್ಯಾರ್ಥಿ ಸಾಹಿಲ್ ಲೋಚಬ್ ಹಾಗೂ ಅವರ ಕುಟುಂಬದವರೊಂದಿಗೆ ಶುಕ್ರವಾರ ಪಾರ್ಲಿಮೆಂಟ್ ಸ್ಟ್ರೀಟ್ ಪೊಲೀಸ್ ಠಾಣೆಗೆ ಆಗಮಿಸಿ ಧರಣಿ ನಡೆಸಿದ ಬೆನ್ನಲ್ಲೇ ಪ್ರಕರಣ ದಾಖಲಾಗಿದೆ. ಜುಲೈ 20ರಂದು ದೆಹಲಿಯಲ್ಲಿ ನಡೆದ ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ಸಾಹಿಲ್ ಲೋಚಬ್ ಪೆಲೆಟ್ ಗನ್ ದಾಳಿಗೆ ಗಾಯಗೊಂಡಿದ್ದರು ಎನ್ನಲಾಗಿದೆ. ಒಂದು ಕಣ್ಣಿನ ದೃಷ್ಟಿಗೆ ಹಾನಿಯಾಗುವ ಸ್ಥಿತಿಯಲ್ಲಿರುವ ಸಾಹಿಲ್, ಹೊಟ್ಟೆಗೂ ಗಾಯಗಳಾಗಿದ್ದು ಏಮ್ಸ್ ಟ್ರಾಮಾ ಸೆಂಟರ್‌ನಲ್ಲಿ ಚಿಕಿತ್ಸೆ ಪಡೆದಿದ್ದಾರೆ.

ಇದಕ್ಕೂ ಮುನ್ನ ಮಂದಿರ ಮಾರ್ಗ್ ಪೊಲೀಸ್ ಠಾಣೆಗೆ ತೆರಳಿ ದೂರು ದಾಖಲಿಸುವಂತೆ ರಾಹುಲ್ ಗಾಂಧಿ ಮನವಿ ಮಾಡಿದ್ದರು. ಬಳಿಕ ಪಾರ್ಲಿಮೆಂಟ್ ಸ್ಟ್ರೀಟ್ ಠಾಣೆಗೆ ತೆರಳಿ ಡಿಸಿಪಿ ಅವರನ್ನು ಭೇಟಿಯಾದ ಅವರು, ಘಟನೆ ನಡೆದು ಹಲವು ದಿನಗಳಾದರೂ ಎಫ್‌ಐಆರ್ ದಾಖಲಿಸದಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದರು.

ಪೊಲೀಸರೊಂದಿಗೆ ಚರ್ಚೆ ಬಳಿಕವೂ ತೃಪ್ತರಾಗದ ರಾಹುಲ್ ಗಾಂಧಿ, ಪ್ರಕರಣ ಇತ್ಯರ್ಥವಾಗುವವರೆಗೆ ಠಾಣೆಯಿಂದ ತೆರಳುವುದಿಲ್ಲ ಎಂದು ಹೇಳಿ ಸುಮಾರು ಆರು ಗಂಟೆಗಳ ಕಾಲ ಧರಣಿ ನಡೆಸಿದರು.

ಸಾಹಿಲ್ ಅವರು ಆಗಸ್ಟ್ 14ರಂದು ವಕೀಲರ ಮೂಲಕ ದೆಹಲಿ ಪೊಲೀಸರಿಗೆ ಲಿಖಿತ ದೂರು ಸಲ್ಲಿಸಿದ್ದರೂ ಸ್ವೀಕೃತಿ ಅಥವಾ ಐಒ (ತನಿಖಾಧಿಕಾರಿ) ಸಂಖ್ಯೆ ನೀಡಿಲ್ಲ ಎಂದು ಆರೋಪಿಸಿದ್ದರು. ಆಗಸ್ಟ್ 17ರಂದು ಇಮೇಲ್ ಮತ್ತು ದೂರವಾಣಿ ಮೂಲಕವೂ ವಿಚಾರಿಸಿದರೂ ಪ್ರತಿಕ್ರಿಯೆ ದೊರೆಯಲಿಲ್ಲ ಎಂದು ತಿಳಿಸಿದ್ದರು.

## ರೇವಂತ್ ರೆಡ್ಡಿ ಅಮೆರಿಕ ಪ್ರವಾಸಕ್ಕೆ ಅನುಮತಿ ನಿರಾಕರಣೆ

● ವಿಕ್ರಮ ವಾಹಿನಿ । ನವದೆಹಲಿ

ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಅವರ ಪ್ರಸ್ತಾವಿತ ಅಮೆರಿಕ ಪ್ರವಾಸಕ್ಕೆ ಕೇಂದ್ರ ಸರ್ಕಾರ ಅನುಮತಿ ನಿರಾಕರಿಸಿದೆ. ಭೇಟಿಯ ಉದ್ದೇಶಕ್ಕೆ ಅವರ ವೇಳಾಪಟ್ಟಿ ಸೂಕ್ತವಾಗಿಲ್ಲ ಎಂಬ ಕಾರಣಕ್ಕೆ ರಾಜಕೀಯ ಅನುಮತಿ ನೀಡಲಾಗಿಲ್ಲ ಎಂದು ವಿದೇಶಾಂಗ ಸಚಿವಾಲಯ (ಎಂಇಎ) ಶುಕ್ರವಾರ ಸ್ಪಷ್ಟಪಡಿಸಿದೆ.



ಕೇಂದ್ರ ಸರ್ಕಾರ ರಾಜಕೀಯ ಕಾರಣಗಳಿಂದ ಅನುಮತಿ ನಿರಾಕರಿಸಿದೆ ಎಂದು ತೆಲಂಗಾಣ ಮುಖ್ಯಮಂತ್ರಿ ಕಚೇರಿ ಆರೋಪಿಸಿದ ಬೆನ್ನಲ್ಲೇ ಎಂಇಎ ಈ ಸ್ಪಷ್ಟನೆ ನೀಡಿದೆ. ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಮುಖ್ಯಮಂತ್ರಿಗಳು ಸೇರಿದಂತೆ ಗಣ್ಯರ ವಿದೇಶ ಪ್ರವಾಸಗಳಿಗೆ ರಾಜಕೀಯ ಅನುಮತಿ ನೀಡುವ ಮೊದಲು ಭೇಟಿಯ ಉದ್ದೇಶ ಹಾಗೂ ವೇಳಾಪಟ್ಟಿಯನ್ನು ಸಚಿವಾಲಯ ಪರಿಶೀಲಿಸುತ್ತದೆ ಎಂದು ಹೇಳಿದರು.

ರೇವಂತ್ ರೆಡ್ಡಿ ಸದ್ಯ ‘ತೆಲಂಗಾಣ ರೈಸಿಂಗ್’ ನಿಯೋಗದೊಂದಿಗೆ ಲಂಡನ್ ಪ್ರವಾಸದಲ್ಲಿದ್ದಾರೆ. ಯುಕೆ ಪ್ರವಾಸದ ಬಳಿಕ ಅಮೆರಿಕಕ್ಕೆ ತೆರಳಿ ಆಗಸ್ಟ್ 30ರಂದು ಹೈದರಾಬಾದ್‌ಗೆ ಮರಳಲು ಅವರು ಯೋಜಿಸಿದ್ದರು.

ಆದರೆ ಅಮೆರಿಕ ಪ್ರವಾಸಕ್ಕೆ ಅನುಮತಿ ಸಿಗದ ಹಿನ್ನೆಲೆಯಲ್ಲಿ ಆಗಸ್ಟ್ 23ರಂದೇ ಹೈದರಾಬಾದ್‌ಗೆ ಮರಳಲಿದ್ದಾರೆ. ರೆಡ್ಡಿ ಅವರ ಯುಕೆ ಪ್ರವಾಸಕ್ಕೆ ಮಾತ್ರ ಕೇಂದ್ರ ಅನುಮತಿ ನೀಡಿದೆ ಎಂದು ಎಂಇಎ ತಿಳಿಸಿದೆ.

ತೆಲಂಗಾಣ ಸರ್ಕಾರದ ‘ತೆಲಂಗಾಣ ರೈಸಿಂಗ್’ ಸಂಪರ್ಕ ಉಪಕ್ರಮದ ಭಾಗವಾಗಿ ಅಮೆರಿಕ ಪ್ರವಾಸವನ್ನು ಆಯೋಜಿಸಲಾಗಿತ್ತು. ಈ ವೇಳೆ ಮುಖ್ಯಮಂತ್ರಿ ಹಾಗೂ ನಿಯೋಗವು ಹೂಡಿಕೆದಾರರು, ಉದ್ಯಮಿಗಳು ಮತ್ತು ವಿವಿಧ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸಲು ಉದ್ದೇಶಿಸಿತ್ತು.

ಅಮೆರಿಕ ಪ್ರವಾಸ ರದ್ದಾಗಿರುವುದು ಕೇಂದ್ರ–ತೆಲಂಗಾಣ ಸರ್ಕಾರಗಳ ನಡುವಿನ ರಾಜಕೀಯ ವಾಗ್ವಾದಕ್ಕೆ ಮತ್ತಷ್ಟು ಕಾರಣವಾಗಿದೆ.

# ಸರ್ಕಾರ–ವಿಪಕ್ಷ ಸಮರ

**ನಾಗೇಂದ್ರಗೆ ಹೆಚ್ಚುವರಿ ಖಾತೆ ನೀಡಿದ ಸರ್ಕಾರದ ನಿರ್ಧಾರಕ್ಕೆ ಬಿಜೆಪಿ–ಜೆಡಿಎಸ್ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ರಾಜೀನಾಮೆಗಾಗಿ ಪಟ್ಟು ಹಿಡಿದಿವೆ. ಪರಿಣಾಮ ವಿಧಾನಸಭೆ–ವಿಧಾನ ಪರಿಷತ್‌ನಲ್ಲಿ ಸತತ ಐದನೇ ದಿನವೂ ಗದ್ದಲ ಮುಂದುವರಿದಿದೆ. ಸಚಿವ ಶಿವಲಿಂಗೇಗೌಡರ ‘ಅಪರಾಧಿ’ ಹೇಳಿಕೆ ವಿವಾದಕ್ಕೆ ತುಪ್ಪ ಸುರಿದರೆ, ವಿಜಯೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಸದನದ ಕಲಾಪಕ್ಕೆ ಅಡ್ಡಿಯಾಗುತ್ತಿರುವ ಹಿನ್ನೆಲೆಯಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವಿನ ಸಂಘರ್ಷ ಮತ್ತಷ್ಟು ತೀವ್ರಗೊಂಡಿದೆ.**

## ಪ್ರತಿಭಟನೆ ನಡುವೆ ನಾಗೇಂದ್ರಗೆ ಹೆಚ್ಚುವರಿ ಖಾತೆ

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ವಿಧಾನ ಪರಿಷತ್‌ನಲ್ಲಿ ಪ್ರತಿಪಕ್ಷಗಳ ಪ್ರತಿಭಟನೆ ಐದನೇ ದಿನವೂ ಮುಂದುವರಿದ ಬೆನ್ನಲ್ಲೇ, ರಾಜ್ಯ ಸರ್ಕಾರ ನಾಗೇಂದ್ರ ಅವರಿಗೆ ಹೆಚ್ಚುವರಿ ಖಾತೆ ಹಂಚಿಕೆ ಮಾಡಿದೆ. ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಜತೆಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಇಲಾಖೆಯ ಜವಾಬ್ದಾರಿಯನ್ನೂ ಅವರಿಗೆ ವಹಿಸಲಾಗಿದೆ.

ನಾಗೇಂದ್ರ ಅವರಿಗೆ ಹೆಚ್ಚುವರಿ ಖಾತೆ ನೀಡಿರುವುದು ಪ್ರತಿಪಕ್ಷಗಳ ಆಕ್ರೋಶಕ್ಕೆ ಕಾರಣವಾಗಿದ್ದು, ರಾಜೀನಾಮೆ ನೀಡುವವರೆಗೂ ಪ್ರತಿಭಟನೆ ಮುಂದುವರಿಸುವುದಾಗಿ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸ್ಪಷ್ಟಪಡಿಸಿದರು.

ಸದನ ಆರಂಭದಲ್ಲಿ ಸಭಾಪತಿ ಸಲೀಂ ಅಹಮದ್, ಐದು ದಿನಗಳಿಂದ ಕಲಾಪ ಸುಗಮವಾಗಿ ನಡೆಯುತ್ತಿಲ್ಲ. ಹಲವು ಪ್ರಮುಖ ವಿಚಾರಗಳ ಕುರಿತು ಚರ್ಚೆಯಾಗಬೇಕಿದ್ದು, ಜನರು ಸದನದ ಕಾರ್ಯವೈಖರಿಯನ್ನು ಗಮನಿಸುತ್ತಿದ್ದಾರೆ. ಹೀಗಾಗಿ ಕಲಾಪ ಸುಗಮವಾಗಿ ನಡೆಯಲು ಸಹಕರಿಸುವಂತೆ ಸದಸ್ಯರಿಗೆ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಛಲವಾದಿ ನಾರಾಯಣಸ್ವಾಮಿ, ನಾಗೇಂದ್ರ ರಾಜೀನಾಮೆ ನೀಡುವವರೆಗೂ ಪ್ರತಿಭಟನೆ ಹಿಂಪಡೆಯುವುದಿಲ್ಲ ಎಂದು ಹೇಳಿದರು. ಆರೋಗ್ಯ ಸಚಿವ ಯು.ಟಿ. ಖಾದರ್, ರಾಜೀನಾಮೆ ವಿಚಾರವನ್ನು ಸದನದಲ್ಲಿ ಚರ್ಚಿಸಬಹುದು, ಆದರೆ ಪ್ರತಿಭಟನೆ ಮೂಲಕ ಕಲಾಪಕ್ಕೆ ಅಡ್ಡಿಪಡಿಸುವುದು ಸರಿಯಲ್ಲ ಎಂದರು.

ಪ್ರತಿಭಟನೆ ಮುಂದುವರಿದ ಹಿನ್ನೆಲೆಯಲ್ಲಿ ಗದ್ದಲದ ನಡುವೆಯೇ ಪ್ರಶ್ನೋತ್ತರ ಕಲಾಪ ನಡೆಸಲಾಯಿತು. ಪ್ರತಿಪಕ್ಷ ಸದಸ್ಯರು ‘ಗೋವಿಂದ, ಗೋವಿಂದ’ ಘೋಷಣೆ ಕೂಗುವುದರೊಂದಿಗೆ ಅಣಕು ಗೀತೆ ಹಾಡಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ವಿಧಾನಸಭೆಯಲ್ಲೂ ಇದೇ ವಿಚಾರವಾಗಿ ಬಿಜೆಪಿ–ಜೆಡಿಎಸ್ ಸದಸ್ಯರು ಪ್ರತಿಭಟನೆ ನಡೆಸಿ, ನಾಗೇಂದ್ರ ಅವರನ್ನು ಸಂಪುಟದಿಂದ ಕೈಬಿಡುವಂತೆ ಆಗ್ರಹಿಸಿದರು. ಪ್ರತಿಪಕ್ಷಗಳ ಗದ್ದಲದ ನಡುವೆಯೇ ಕರ್ನಾಟಕ ಅಪಾರ್ಟ್‌ಮೆಂಟ್ (ಮಾಲೀಕತ್ವ ಮತ್ತು ನಿರ್ವಹಣೆ) ಮಸೂದೆ–2026 ಸೇರಿದಂತೆ ಮೂರು ಮಸೂದೆಗಳನ್ನು ಯಾವುದೇ ಚರ್ಚೆಯಿಲ್ಲದೆ ಅಂಗೀಕರಿಸಲಾಯಿತು.

ವಾಲ್ಮೀಕಿ ನಿಗಮದ ಹಣ ದುರುಪಯೋಗ ಪ್ರಕರಣದ ಹಿನ್ನೆಲೆಯಲ್ಲಿ ನಾಗೇಂದ್ರ ಅವರು ಈ ಹಿಂದೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಬಳಿಕ ಆ.3ರಂದು ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟಕ್ಕೆ ಮರು ಸೇರ್ಪಡೆಯಾಗಿ ಯೋಜನೆ ಮತ್ತು ಸಾಂಖ್ಯಿಕ ಖಾತೆ ಹೊಣೆ ವಹಿಸಿಕೊಂಡಿದ್ದರು. ಇದೀಗ ಹೆಚ್ಚುವರಿ ಖಾತೆ ನೀಡಿರುವುದು ಪ್ರತಿಪಕ್ಷಗಳ ಆಕ್ರೋಶವನ್ನು ಮತ್ತಷ್ಟು ಹೆಚ್ಚಿಸಿದೆ.

## ಭ್ರಷ್ಟರಿಂದ, ಭ್ರಷ್ಟರಿಗಾಗಿ ಇರುವ ಸರಕಾರ: ವಿಜಯೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು

ಭ್ರಷ್ಟ ಸಚಿವ ನಾಗೇಂದ್ರರ ರಾಜೀನಾಮೆ ವಿಚಾರದಲ್ಲಿ ಸರಕಾರದ ಮೊಂಡುತನವನ್ನು ಗಮನಿಸಿದರೆ ಈ ಸರಕಾರ ಮತ್ತು ಕಾಂಗ್ರೆಸ್ ಪಕ್ಷ ಇರುವುದೇ ಭ್ರಷ್ಟರಿಂದ, ಭ್ರಷ್ಟರಿಗಾಗಿ ಎಂಬುದು ಸಾಬೀತಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ.



ಬಿ. ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಶಾಸಕರ ಭವನದ ಮಹರ್ಷಿ ವಾಲ್ಮೀಕಿ ಪ್ರತಿಮೆ ಬಳಿ ಇಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ವಿಪಕ್ಷ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಸದನ ಮುಗಿದ ನಂತರವೂ ನಮ್ಮ ಹೋರಾಟ ಮುಂದುವರೆಯಲಿದೆ ಎಂದು ಪ್ರಕಟಿಸಿದರು. ಜನರಿಂದ, ಜನರಿಗಾಗಿ, ಜನರಿಗೋಸ್ಕರ ಇರುವ ಕಾಂಗ್ರೆಸ್ ಸರಕಾರ ಇದಲ್ಲ ಎಂದು ಟೀಕಿಸಿದರು.

**ದಲಿತರ ಬಗ್ಗೆ ಮೊಸಳೆಕಣ್ಣೀರು:** ಭ್ರಷ್ಟಚಾರಿಗಳನ್ನು ರಕ್ಷಣೆ ಮಾಡಲು ಭ್ರಷ್ಟರಿಂದ, ಭ್ರಷ್ಟಾಚಾರಕ್ಕೋಸ್ಕರ ಇರುವ ಸರಕಾರ ಇದಾಗಿದೆ ಎಂದು ಆರೋಪಿಸಿದರು. ದಲಿತರ ಬಗ್ಗೆ ನಾಗೇಂದ್ರ ಮತ್ತು ಕಾಂಗ್ರೆಸ್ ಸರಕಾರ ಮೊಸಳೆಕಣ್ಣೀರು ಹಾಕುತ್ತಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಲೂಟಿ ಮಾಡುವ ವೇಳೆ ನಿಮ್ಮ ದಲಿತಪರ ಕಾಳಜಿ ಎಲ್ಲಿ ಹೋಗಿತ್ತು ಎಂದು ಕೇಳಿದರು.

**ನಾಗೇಂದ್ರರನ್ನು ಸಚಿವ ಸಂಪುಟದಿಂದ ಕೈಬಿಡಲು ಒತ್ತಾಯ:** ಹಣ ಲೂಟಿ ಮಾಡುವ ವೇಳೆ ರಾಹುಲ್ ಗಾಂಧಿ, ಕೆ.ಸಿ.ವೇಣುಗೋಪಾಲ್, ಡಿ.ಕೆ.ಶಿವಕುಮಾರರಿಗೆ ಅದು ದಲಿತರ ಹಣ ಎಂದು ನೆನಪಾಗಲಿಲ್ಲವೇ? ನಮ್ಮ ಮೇಲೆ ದಲಿತರನ್ನು ಟಾರ್ಗೆಟ್ ಮಾಡುವ ಆರೋಪ ಮಾಡುತ್ತಿದ್ದೀರಲ್ಲವೇ? ನಿಮಗೆ, ಕಾಂಗ್ರೆಸ್ ಸರಕಾರಕ್ಕೆ ನಾಚಿಕೆ, ಮಾನ ಮರ್ಯಾದೆ ಇದ್ದರೆ ಈ ಸಬೂಬನ್ನು ಕೊಡುವುದನ್ನು ಬಿಟ್ಟು ದಲಿತರ ಅಭಿವೃದ್ಧಿಗೆ ಮೀಸಲಿಟ್ಟ ಹಣ ಲೂಟಿ ಮಾಡಿದ ನಾಗೇಂದ್ರರನ್ನು ಸಚಿವ ಸಂಪುಟದಿಂದ ಕೈಬಿಡಿ ಎಂದು ಆಗ್ರಹಿಸಿದರು.

**ನಾಗೇಂದ್ರರಿಗೆ ಕ್ಲೀನ್ ಚಿಟ್ ಸಿಕ್ಕಿದೆಯೇ?:** ಸಿದ್ದರಾಮಯ್ಯನವರು ಸಚಿವ ಸ್ಥಾನದಿಂದ ಕೈಬಿಟ್ಟ ನಾಗೇಂದ್ರರನ್ನು ವಾಪಸ್ ಸಚಿವರನ್ನಾಗಿ ಮಾಡಲು ಏನು ಬದಲಾವಣೆ ಆಗಿದೆ? ಅವರ ಬಗ್ಗೆ ಇ.ಡಿ. ಕ್ಲೀನ್ ಚಿಟ್ ನೀಡಿದ್ದಾರಾ ಎಂದು ಡಿ.ಕೆ.ಶಿವಕುಮಾರರನ್ನು ಪ್ರಶ್ನಿಸಿದರು. ತನಿಖೆ ಈಗಲೂ ನಡೆಯುತ್ತಿದೆ. ಅವರನ್ನು ಸಚಿವ ಸಂಪುಟಕ್ಕೆ ತೆಗೆದುಕೊಂಡು ರಾಜ್ಯದ ದಲಿತ ಸಮುದಾಯಕ್ಕೆ ಮೋಸ ಮಾಡಿದ್ದಾರೆ ಎಂದು ದೂರಿದರು.

ಬರ, ಕೆಪಿಎಸ್ಸಿ ಹಗರಣ ಮತ್ತಿತರ ಜ್ವಲಂತ ಸಮಸ್ಯೆಗಳ ಬಗ್ಗೆ ಸದನದಲ್ಲಿ ಚರ್ಚೆಗೆ ಅವಕಾಶ ಮಾಡಿಕೊಡುವ ದೃಷ್ಟಿಯಿಂದ ಮುಖ್ಯಮಂತ್ರಿಗಳು ನಾಗೇಂದ್ರರನ್ನು ಸಚಿವ ಸಂಪುಟದಿಂದ ಕೈಬಿಡಬೇಕು ಎಂದು ತಿಳಿಸಿದರು. ರಾಜ್ಯದ ಜನರು ಸರಕಾರ ಭ್ರಷ್ಟತನ ಸೇರಿ ಎಲ್ಲವನ್ನೂ ಗಮನಿಸುತ್ತಿದ್ದಾರೆ ಎಂದು ಎಚ್ಚರಿಸಿದರು.

## 5ನೇ ದಿನವೂ ಸದನದಲ್ಲಿ ಗದ್ದಲ

● ವಿಕ್ರಮ ವಾಹಿನಿ । ಬೆಂಗಳೂರು

ವಾಲ್ಮೀಕಿ ನಿಗಮದ ಹಣ ದುರುಪಯೋಗ ಪ್ರಕರಣದಲ್ಲಿ ಆರೋಪ ಎದುರಿಸುತ್ತಿರುವ ಸಚಿವ ಬಿ. ನಾಗೇಂದ್ರ ಅವರನ್ನು ಸಂಪುಟದಿಂದ ವಜಾಗೊಳಿಸುವಂತೆ ಆಗ್ರಹಿಸಿ ಬಿಜೆಪಿ–ಜೆಡಿಎಸ್ ಸದಸ್ಯರು ನಡೆಸಿದ ಪ್ರತಿಭಟನೆಯಿಂದ ವಿಧಾನಸಭೆ ಕಲಾಪ ಸತತ ಐದನೇ ದಿನವೂ ಅಸ್ತವ್ಯಸ್ತಗೊಂಡಿತು.

ಸದನ ಆರಂಭವಾಗುತ್ತಿದ್ದಂತೆ ಪ್ರತಿಪಕ್ಷ ಸದಸ್ಯರು ನಾಗೇಂದ್ರ ಅವರನ್ನು ಸಂಪುಟದಿಂದ ಕೈಬಿಡಬೇಕು ಎಂದು ಘೋಷಣೆ ಕೂಗಿ ಪ್ರತಿಭಟನೆ ನಡೆಸಿದರು. ಪ್ರತಿಭಟನೆ ನಡುವೆಯೇ ಸ್ಪೀಕರ್ ಜಿ.ಎಸ್. ಪಾಟೀಲ್ ಅವರು ಸಚಿವ ಕೆ.ಎಚ್. ಮುನಿಯಪ್ಪ ಅವರನ್ನು ಸದಸ್ಯರ ಪ್ರಶ್ನೆಗಳಿಗೆ ಉತ್ತರಿಸುವಂತೆ ಸೂಚಿಸಿದರು. ಬಳಿಕ ಉಪಸಭಾಪತಿ ಮಂಕಾಳ ವೈದ್ಯ ಅವರಿಗೆ ಅರ್ಜಿಗಳು ಹಾಗೂ ವರದಿಗಳನ್ನು ಮಂಡಿಸುವಂತೆ ಸೂಚಿಸಲಾಯಿತು. ಪ್ರತಿಪಕ್ಷಗಳ ಗದ್ದಲದ ನಡುವೆಯೇ ಕರ್ನಾಟಕ ಅಪಾರ್ಟ್‌ಮೆಂಟ್ (ಮಾಲೀಕತ್ವ ಮತ್ತು ನಿರ್ವಹಣೆ) ಮಸೂದೆ–2026, ಕರ್ನಾಟಕ ಪುರಸಭೆ ನಿಗಮಗಳು (ತಿದ್ದುಪಡಿ) ಮಸೂದೆ–2026 ಹಾಗೂ ಕರ್ನಾಟಕ ಪುರಸಭೆಗಳು (ತಿದ್ದುಪಡಿ) ಮಸೂದೆ–2026 ಸೇರಿದಂತೆ ಮೂರು ಮಸೂದೆಗಳನ್ನು ಯಾವುದೇ ಚರ್ಚೆಯಿಲ್ಲದೆ ಅಂಗೀಕರಿಸಲಾಯಿತು.

ವಾಲ್ಮೀಕಿ ನಿಗಮದ ಹಣ ದುರುಪಯೋಗ ಪ್ರಕರಣದ ಹಿನ್ನೆಲೆಯಲ್ಲಿ ನಾಗೇಂದ್ರ ಅವರು ಹಿಂದಿನ ಸಿದ್ದರಾಮಯ್ಯ ಸಂಪುಟಕ್ಕೆ ರಾಜೀನಾಮೆ ನೀಡಿದ್ದರು. ಬಳಿಕ ಆ.3ರಂದು ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟಕ್ಕೆ ಮರು ಸೇರ್ಪಡೆಯಾಗಿ ಯೋಜನೆ ಮತ್ತು ಸಾಂಖ್ಯಿಕ ಖಾತೆ ಹೊಣೆ ಹೊತ್ತಿದ್ದಾರೆ.

## ‘ನಾಗೇಂದ್ರ ಅಪರಾಧಿ’ ಹೇಳಿಕೆ: ಸಚಿವ ಶಿವಲಿಂಗೇಗೌಡಗೆ ಪೇಚು

● ವಿಕ್ರಮ ವಾಹಿನಿ । ಬೆಂಗಳೂರು

ವಾಲ್ಮೀಕಿ ನಿಗಮದ ಹಣ ದುರುಪಯೋಗ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಕುರಿತು ಅಬಕಾರಿ ಸಚಿವ ಕೆ.ಎನ್. ಶಿವಲಿಂಗೇಗೌಡ ನೀಡಿದ ಹೇಳಿಕೆ ಇದೀಗ ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.



ವಿಧಾನಸೌಧದ ಗಾಂಧಿ ಪ್ರತಿಮೆ ಎದುರು ಬಿಜೆಪಿ ವಿರುದ್ಧ ಕಾಂಗ್ರೆಸ್ ನಡೆಸಿದ ಪ್ರತಿಭಟನೆಯಲ್ಲಿ ಮಾತನಾಡುತ್ತಿದ್ದ ಶಿವಲಿಂಗೇಗೌಡ ಅವರನ್ನು ಮಾಧ್ಯಮ ಪ್ರತಿನಿಧಿಯೊಬ್ಬರು, ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿ ನಾಗೇಂದ್ರ ಅವರಿಂದ ಏಕೆ ರಾಜೀನಾಮೆ ಪಡೆಯಲಾಗಿತ್ತು ಎಂದು ಪ್ರಶ್ನಿಸಿದರು. 3ನೇ ಪುಟಕ್ಕೆ...

## ಮಳೆ ಕೊರತೆ: ರಾಜ್ಯದಲ್ಲಿ ಮೋಡ ಬಿತ್ತನೆಗೆ ಸರ್ಕಾರ ಆದೇಶ

● ವಿಕ್ರಮ ವಾಹಿನಿ । ಬೆಂಗಳೂರು

**ರಾಜ್ಯದಲ್ಲಿ ಶೇ.31ರಷ್ಟು ಮುಂಗಾರು ಮಳೆ ಕೊರತೆ ದಾಖಲಾಗಿರುವ ಹಿನ್ನೆಲೆಯಲ್ಲಿ 60 ದಿನಗಳ ಕಾಲ ಮೋಡ ಬಿತ್ತನೆ ನಡೆಸಲು ಸರ್ಕಾರ ನಿರ್ಧರಿಸಿದೆ. 28.52 ಕೋಟಿ ವೆಚ್ಚದಲ್ಲಿ ಒಂದು ವಿಮಾನದ ಮೂಲಕ 200 ಗಂಟೆಗಳ ಹಾರಾಟ ನಡೆಸಲಿದ್ದು, ಕೃಷಿ, ತೋಟಗಾರಿಕೆ ಹಾಗೂ ಕುಡಿಯುವ ನೀರಿನ ಸಮಸ್ಯೆ ತಗ್ಗಿಸುವ ನಿರೀಕ್ಷೆ ಇದೆ.**

ರಾಜ್ಯದಲ್ಲಿ ಮುಂಗಾರು ಮಳೆ ಕೊರತೆ ಮುಂದುವರಿದಿರುವ ಹಿನ್ನೆಲೆಯಲ್ಲಿ ಮಳೆಯ ಪ್ರಮಾಣ ಹೆಚ್ಚಿಸುವ ಪೂರಕ ಕ್ರಮವಾಗಿ ಮೋಡ ಬಿತ್ತನೆ ಕಾರ್ಯಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. 60 ದಿನಗಳ ಅವಧಿಯಲ್ಲಿ ಒಂದು ವಿಮಾನದ ಮೂಲಕ ಒಟ್ಟು 200 ಗಂಟೆಗಳ ವೈಮಾನಿಕ ಹಾರಾಟ ನಡೆಸಿ ಮೋಡ ಬಿತ್ತನೆ ಕಾರ್ಯಾಚರಣೆ ಕೈಗೊಳ್ಳಲು 28.52 ಕೋಟಿ ಅಂದಾಜು ವೆಚ್ಚಕ್ಕೆ ಅನುಮೋದನೆ ನೀಡಲಾಗಿದೆ. ಜಿಎಸ್‌ಟಿ ವೆಚ್ಚ ಇದಕ್ಕೆ ಹೆಚ್ಚುವರಿಯಾಗಿರಲಿದೆ.

**ಸಂಪುಟದಿಂದ ಆಡಳಿತಾತ್ಮಕ ಅನುಮೋದನೆ**

ಆ.19ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮೋಡ ಬಿತ್ತನೆ ಕಾರ್ಯಕ್ರಮಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸೂಕ್ತ ಹವಾಮಾನ ಪರಿಸ್ಥಿತಿ ಹಾಗೂ ಮೋಡಗಳ ಲಭ್ಯತೆ ಕಂಡುಬಂದಾಗ ಕಾರ್ಯಾಚರಣೆ ನಡೆಸಲು ಅಗತ್ಯ ಸಿದ್ಧತೆ ಕೈಗೊಳ್ಳಲಾಗುತ್ತಿದೆ. ಮೋಡಗಳ ಸ್ವರೂಪ ಮತ್ತು ಹವಾಮಾನ ಪರಿಸ್ಥಿತಿಗೆ ಅನುಗುಣವಾಗಿ ವಿಮಾನದ ಹಾರಾಟವನ್ನು ಯೋಜಿಸಲಾಗುತ್ತದೆ.

**29 ಜಿಲ್ಲೆಗಳ 188 ತಾಲೂಕುಗಳಲ್ಲಿ ಮಳೆ ಕೊರತೆ**

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆಎಸ್‌ಎನ್‌ಡಿಎಂಸಿ) ವರದಿ ಪ್ರಕಾರ, ಜೂನ್‌ನಿಂದ ರಾಜ್ಯದಲ್ಲಿ ಒಟ್ಟಾರೆ ಶೇ.31ರಷ್ಟು ಮುಂಗಾರು ಮಳೆ ಕೊರತೆ ದಾಖಲಾಗಿದೆ. 29 ಜಿಲ್ಲೆಗಳ 188 ತಾಲೂಕುಗಳಲ್ಲಿ ಮಳೆ ಕೊರತೆ ಕಂಡುಬಂದಿದ್ದು, ಹಲವು ಪ್ರದೇಶಗಳಲ್ಲಿ ಕೃಷಿ ಹಾಗೂ ಕುಡಿಯುವ ನೀರಿನ ಲಭ್ಯತೆ ಮೇಲೆ ಪರಿಣಾಮ ಬೀರುವ ಆತಂಕ ಎದುರಾಗಿದೆ.



ಕಲಬುರಗಿ, ಬೆಳಗಾವಿ ಹಾಗೂ ಬೆಂಗಳೂರು ಪ್ರಾದೇಶಿಕ ವಿಭಾಗಗಳಲ್ಲಿ ನಡೆದ ಸಭೆಗಳಲ್ಲಿ ಮಳೆ ಕೊರತೆ ಮತ್ತು ಉದ್ಭವಿಸುತ್ತಿರುವ ಬರ ಪರಿಸ್ಥಿತಿ ಕುರಿತು ಚರ್ಚಿಸಲಾಗಿತ್ತು. ಮಳೆ ಕೊರತೆಯನ್ನು ಸಾಧ್ಯವಾದಷ್ಟು ತಗ್ಗಿಸಲು ಮೋಡ ಬಿತ್ತನೆಯಂತಹ ಹೊಸ ತಂತ್ರಜ್ಞಾನವನ್ನು ಆದ್ಯತೆಯ ಮೇಲೆ ಬಳಸುವಂತೆ ಶಾಸಕರು ಸರ್ಕಾರಕ್ಕೆ ಮನವಿ ಮಾಡಿದ್ದರು.

**ಕೃಷಿ, ತೋಟಗಾರಿಕೆಗೆ ನಿರೀಕ್ಷಿತ ನೆರವು**

ಮೋಡ ಬಿತ್ತನೆ ಯಶಸ್ವಿಯಾದರೆ ಮಳೆಯಾಶ್ರಿತ ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಕೃಷಿಗೆ ಅಗತ್ಯವಾದ ತೇವಾಂಶ ಒದಗಿಸಲು ನೆರವಾಗಬಹುದು. ಜತೆಗೆ ಬರ ಪರಿಸ್ಥಿತಿಯಿಂದ ಕುಡಿಯುವ ನೀರಿನ ಲಭ್ಯತೆ ಮೇಲೆ ಉಂಟಾಗಬಹುದಾದ ಪರಿಣಾಮವನ್ನು ತಗ್ಗಿಸುವಲ್ಲಿಯೂ ಇದು ಪೂರಕ ಕ್ರಮವಾಗಬಹುದು ಎಂದು ಸರ್ಕಾರ ನಿರೀಕ್ಷಿಸಿದೆ.

ಆದರೆ ಮೋಡ ಬಿತ್ತನೆಯಿಂದ ನಿರೀಕ್ಷಿತ ಪ್ರಮಾಣದಲ್ಲಿ ಮಳೆ ಬೀಳುವುದು ಖಚಿತವಲ್ಲ. ಮೋಡಗಳ ವಿಧ, ಅವುಗಳಲ್ಲಿರುವ ದ್ರವ ನೀರಿನ ಪ್ರಮಾಣ, ಗಾಳಿಯ ವೇಗ ಮತ್ತು ದಿಕ್ಕು ಸೇರಿದಂತೆ ಹಲವು ಹವಾಮಾನ ಅಂಶಗಳ ಮೇಲೆ ಕಾರ್ಯಾಚರಣೆಯ ಪರಿಣಾಮ ಅವಲಂಬಿತವಾಗಿರುತ್ತದೆ.

**ಕೆಎಸ್‌ಎನ್‌ಡಿಎಂಸಿಗೆ ವೈಜ್ಞಾನಿಕ ಮೇಲ್ವಿಚಾರಣೆ**

ಮೋಡ ಬಿತ್ತನೆ ವೈಜ್ಞಾನಿಕ ಹಾಗೂ ತಾಂತ್ರಿಕ ಚಟುವಟಿಕೆಯಾಗಿರುವ ಹಿನ್ನೆಲೆಯಲ್ಲಿ ಕಾರ್ಯಕ್ರಮದ ವೈಜ್ಞಾನಿಕ ಮೇಲ್ವಿಚಾರಣೆ, ಕಾರ್ಯಾಚರಣೆ ನಂತರದ ಮೌಲ್ಯಮಾಪನ, ಬಿಲ್ ಪ್ರಮಾಣೀಕರಣ ಸೇರಿದಂತೆ ತಾಂತ್ರಿಕ ಚಟುವಟಿಕೆಗಳನ್ನು ಕಂದಾಯ ಇಲಾಖೆಯಡಿ ಕಾರ್ಯನಿರ್ವಹಿಸುವ ಕೆಎಸ್‌ಎನ್‌ಡಿಎಂಸಿ ನಿರ್ವಹಿಸಲಿದೆ.

ಕಾರ್ಯಕ್ರಮದ ಆಡಳಿತಾತ್ಮಕ ಮತ್ತು ಆರ್ಥಿಕ ವ್ಯವಹಾರಗಳನ್ನು ಜಲಸಂಪನ್ಮೂಲ ಇಲಾಖೆಯ ಕರ್ನಾಟಕ ನೀರಾವರಿ ನಿಗಮ ನಿಯಮಿತ (ಕೆಎನ್‌ಎನ್‌ಎಲ್) ಮೂಲಕ ನಿರ್ವಹಿಸಲು ನಿರ್ಧರಿಸಲಾಗಿದೆ.

**ಹಿಂದೆಯೂ ನಡೆದಿತ್ತು ಮೋಡ ಬಿತ್ತನೆ**

ಕರ್ನಾಟಕದಲ್ಲಿ ಈ ಹಿಂದೆ ಹಲವು ಬಾರಿ ಮೋಡ ಬಿತ್ತನೆ ಕಾರ್ಯಕ್ರಮ ಕೈಗೊಳ್ಳಲಾಗಿದೆ. ಜಲಸಂಪನ್ಮೂಲ ಇಲಾಖೆಯಿಂದ 2003 ಮತ್ತು 2012ರಲ್ಲಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ 2017, 2019 ಮತ್ತು 2020ರಲ್ಲಿ ಕಾರ್ಯಕ್ರಮ ನಡೆಸಲಾಗಿತ್ತು. 2ನೇ ಪುಟಕ್ಕೆ...

## ಹಿರಿಯ ನಟಿ ಸಾಹುಕಾರ್ ಜಾನಕಿ ನಿಧನ

● ವಿಕ್ರಮ ವಾಹಿನಿ । ಚೆನ್ನೈ

ಕನ್ನಡ ಸೇರಿದಂತೆ ದಕ್ಷಿಣ ಭಾರತದ 400ಕ್ಕೂ ಹೆಚ್ಚು ಸಿನಿಮಾಗಳಲ್ಲಿ ಅಭಿನಯಿಸಿ, ಹಲವು ದಶಕಗಳ ಕಾಲ ಚಿತ್ರರಸಿಕರ ಮನಗೆದ್ದಿದ್ದ ಹಿರಿಯ ನಟಿ ಸಾಹುಕಾರ್ ಜಾನಕಿ (94) ಶುಕ್ರವಾರ ನಿಧನರಾದರು.



ಸಾಹುಕಾರ್ ಜಾನಕಿ ವಯೋಸಹಜ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದ ಅವರು ಚೆನ್ನೈನ ಅಲ್ವಾರ್‌ಪೇಟೆಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು.

ಮಧ್ಯಾಹ್ನ 1.59ಕ್ಕೆ ಅವರು ಕೊನೆಯುಸಿರೆಳೆದಿದ್ದಾರೆ ಎಂದು ನಾಡಿಗರ್ ಸಂಗಮ್ ಅಧ್ಯಕ್ಷ ಹಾಗೂ ನಟ ನಾಸರ್ ತಿಳಿಸಿದ್ದಾರೆ.

ಅವರ ಪಾರ್ಥಿವ ಶರೀರವನ್ನು ಸಂಜೆ 5 ಗಂಟೆಯಿಂದ ತೇನಾಂಪೇಟೆಯ ಸೆಂಟೋಘ್ ರಸ್ತೆಯಲ್ಲಿ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಇರಿಸಲಾಗುವುದು.

ಆಂಧ್ರಪ್ರದೇಶದ ರಾಜಮಂಡ್ರಿಯಲ್ಲಿ ಶಂಕರಮಂಚಿ ಜಾನಕಿಯಾಗಿ ಜನಿಸಿದ ಅವರು, ಚಿತ್ರರಂಗ ಪ್ರವೇಶಕ್ಕೂ ಮುನ್ನ ಆಕಾಶವಾಣಿಯಲ್ಲಿ ರೇಡಿಯೋ ಜಾಕಿಯಾಗಿ ಕಾರ್ಯನಿರ್ವಹಿಸಿದ್ದರು. 2ನೇ ಪುಟಕ್ಕೆ...

PRGI NO: KARKAN/2018/78481
ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

### ಸವಿ ವಾಹಿನಿ

ಪ್ರತಿ ದಿನವನ್ನು ನಿಮ್ಮ ದಿನವಾಗಿ ಕಳೆಯಿರಿ. ನಿಮ್ಮೆಡೆಗೆ ಬರುತ್ತಿರುವ ಎಲ್ಲ ಅವಕಾಶಗಳನ್ನು ಎರಡು ತೋಳುಗಳನ್ನು ಚಾಚಿ ಬಾಚಿ ಅಪ್ಪಿಕೊಳ್ಳಿ. ಏಕೆಂದರೆ ಕೆಲವೊಂದಿಷ್ಟು ಅವಕಾಶಗಳು ಕೇವಲ ಒಂದೇ ಸಲ ಬರುತ್ತವೆ, ಪದೇಪದೇ ಬರುವುದಿಲ್ಲ.

### ದಿನ ಪಂಚಾಂಗ

ಆಗಸ್ಟ್, 22-2026 ವರ್ಷ ಋತು, ಶ್ರಾವಣ ಮಾಸ, ಶುದ್ಧ ಪಕ್ಷ. ದಶಮಿ ತಿಥಿ ರಾ-1:32
ಜ್ಯೇಷ್ಠ ನಕ್ಷತ್ರ ಮ-3:47
ರಾಹುಕಾಲ ಬೆ-9:15-10:48
4ನೇ ಶನಿವಾರ, ಶ್ರಾವಣ ಶನಿವಾರ, ಪಾರ್ಸಿ ಹೊಸ ವರ್ಷ, ಸುದರ್ಶನ ನೃಸಿಂಹ ಅವತಾರದಿನ, ಕೂಡ್ಲೂರು ರಥ, ನಂದೀಪುರ ಗುರುದೊಡ್ಡಬಸವೇಶ್ವರ ಕುಂಭಾಭಿಷೇಕ, ಗದಗ । ಹಾಳಕೆರೆ ಅನ್ನದಾನಸ್ವಾಮಿ ಬೆಳ್ಳಿರಥ, ಕಾರವಾರ ಪದ್ಮನಾಭಸ್ವಾಮಿ ಆರಾಧನೆ, ಧಾರವಾಡ ಗುರುನಾಥರಾಯ ಪುಣ್ಯದಿನ



ಸಿಎಂ ಡಿ ಕೆ ಶಿವಕುಮಾರ್ ಮಾಧ್ಯಮ ಕಾರ್ಯದರ್ಶಿಗಳ ಕಚೇರಿಯನ್ನು ವಿಧಾನಸೌಧದ ಎರಡನೇ ಮಹಡಿಯಲ್ಲಿ (ಕೊಠಡಿ ಸಂಖ್ಯೆ 204) ಶುಕ್ರವಾರ ಉದ್ಘಾಟಿಸಿದರು. ಮೇಲ್ಮನೆ ಸದಸ್ಯರಾದ ಬಲ್ಕಿಸ್ ಬಾನು, ಬಸನಗೌಡ ಬಾದರ್ಲಿ, ಶ್ರೀನಿವಾಸ್, ಸಿಎಂ ಮಾಧ್ಯಮ ಕಾರ್ಯದರ್ಶಿಗಳಾದ ಪಿ ತ್ಯಾಗರಾಜ್, ಆರ್ ಜಯಪ್ರಕಾಶ್ ಉಪಸ್ಥಿತರಿದ್ದರು.

## ಅಂಜನೇಯ ದೇಗುಲದಲ್ಲಿ ಮೂತ್ರ ವಿಸರ್ಜನೆ ಆರೋಪ: ವ್ಯಕ್ತಿ ಬಂಧನ

● ವಿಕ್ರಮ ವಾಹಿನಿ । ಹಾವೇರಿ

ಶಿಗ್ಗಾವಿ ಪಟ್ಟಣದ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಮೂತ್ರ ವಿಸರ್ಜನೆ ಮಾಡಿ ಅಪವಿತ್ರಗೊಳಿಸಿದ ಆರೋಪದ ಮೇಲೆ 31 ವರ್ಷದ ಮೊಹಮ್ಮದ್ ಜಾಫರ್ ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ. ಘಟನೆ ಬಳಿಕ ಹಿಂದೂ ಸಂಘಟನೆಗಳ ಪ್ರತಿಭಟನೆಯಿಂದ ಕೆಲಕಾಲ ಸ್ಥಳದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿತ್ತು.

ಗುರುವಾರ ರಾತ್ರಿ ಸುಮಾರು 9.30ರ ವೇಳೆಗೆ ಜಾಫರ್ ದೇವಸ್ಥಾನದ ಆವರಣಕ್ಕೆ ಪ್ರವೇಶಿಸಿ ಮೂತ್ರ ವಿಸರ್ಜನೆ ಮಾಡಿದ್ದಾನೆ ಎಂದು ಆರೋಪಿಸಲಾಗಿದೆ. ಕೃತ್ಯವನ್ನು ಗಮನಿಸಿದ ಸ್ಥಳೀಯರು ಆತನನ್ನು ಹಿಡಿದು ವಿಚಾರಿಸಿದ ಬಳಿಕ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಧಾವಿಸಿದ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದು ಪರಿಸ್ಥಿತಿ ನಿಯಂತ್ರಣಕ್ಕೆ ತಂದರು.

ಘಟನೆ ಸುದ್ದಿ ಹರಡುತ್ತಿದ್ದಂತೆ ವಿವಿಧ ಹಿಂದೂ ಸಂಘಟನೆಗಳ ಕಾರ್ಯಕರ್ತರು ದೇವಸ್ಥಾನದ ಬಳಿ ಜಮಾಯಿಸಿ ಪ್ರತಿಭಟನೆ ನಡೆಸಿದರು. ಯಾವುದೇ ಅಹಿತಕರ ಘಟನೆ ನಡೆಯದಂತೆ ದೇವಸ್ಥಾನ ಹಾಗೂ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿದೆ.

ಜಾಫರ್ ಈ ಹಿಂದೆ ದೇವಸ್ಥಾನದ ಸುತ್ತಮುತ್ತ ಮಲಗುತ್ತಿದ್ದ ಎಂಬುದು ಪ್ರಾಥಮಿಕ ವಿಚಾರಣೆಯಲ್ಲಿ ತಿಳಿದುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ದೇವಸ್ಥಾನದ ಆವರಣದಲ್ಲಿ ಇಂತಹ ಕೃತ್ಯ ಎಸಗಲು ಕಾರಣವೇನು ಎಂಬುದರ ಕುರಿತು ತನಿಖೆ ಮುಂದುವರಿದಿದೆ. ಘಟನೆಗೆ ಸಂಬಂಧಿಸಿದಂತೆ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್)ಯ ಸಂಬಂಧಿತ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಆರೋಪಿಯನ್ನು ಬಂಧಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.


### ಆರೋಗ್ಯ

## ದೆಹಲಿಯಲ್ಲಿ ಹೆಚ್1ಎನ್1 ಏರಿಕೆ: ಮಕ್ಕಳಲ್ಲಿ ಎಚ್ಚರಿಕೆ ಅಗತ್ಯ

● ವಿಕ್ರಮ ವಾಹಿನಿ । ನವದೆಹಲಿ

ದೆಹಲಿಯಲ್ಲಿ ಹೆಚ್1ಎನ್1 ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜನರಲ್ಲಿ, ವಿಶೇಷವಾಗಿ ಮಕ್ಕಳ ಪೋಷಕರು ಹಾಗೂ ವಿವಿಧ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರಲ್ಲಿ ಆತಂಕ ಹೆಚ್ಚಾಗಿದೆ. ಆದರೆ ಪ್ರಕರಣಗಳ ಏರಿಕೆ ಕಂಡುಬಂದಿರುವುದರಿಂದ ಭಯಪಡುವ ಅಗತ್ಯವಿಲ್ಲ. ರೋಗದ ಲಕ್ಷಣಗಳನ್ನು ಆರಂಭದಲ್ಲೇ ಗುರುತಿಸಿ, ಅಗತ್ಯ ಮುನ್ನೆಚ್ಚರಿಕೆ ವಹಿಸುವುದು ಮುಖ್ಯ ಎಂದು ತಜ್ಞರು ಸಲಹೆ ನೀಡಿದ್ದಾರೆ.

ಪಿಎಸ್‌ಆರ್‌ಐ ಆಸ್ಪತ್ರೆಯ ಶ್ವಾಸಕೋಶ, ತೀವ್ರ ನಿಗಾ ಹಾಗೂ ನಿದ್ರಾ ಚಿಕಿತ್ಸಾ ವಿಭಾಗದ ಹಿರಿಯ ಸಲಹೆಗಾರ್ತಿ ಡಾ. ನೀತು ಜೈನ್, ಹೆಚ್1ಎನ್1 ಸೋಂಕಿನ ಕುರಿತು ಮಾಹಿತಿ ನೀಡಿದ್ದು, ಮಕ್ಕಳು, ವೃದ್ಧರು, ಗರ್ಭಿಣಿಯರು ಹಾಗೂ ಅಸ್ತಮಾ, ಮಧುಮೇಹ, ಹೃದಯ ಕಾಯಿಲೆ ಅಥವಾ ದುರ್ಬಲ ರೋಗನಿರೋಧಕ ಶಕ್ತಿ ಹೊಂದಿರುವವರು ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದಿದ್ದಾರೆ.



ಹೆಚ್1ಎನ್1ನ ಲಕ್ಷಣಗಳು ಸಾಮಾನ್ಯ ಜ್ವರದಂತೆಯೇ ಇರುತ್ತವೆ. ಜ್ವರ, ಕೆಮ್ಮು, ಗಂಟಲು ನೋವು, ತಲೆನೋವು, ಮೈಕೈ ನೋವು, ಚಳಿ, ಆಯಾಸ ಮತ್ತು ದೌರ್ಬಲ್ಯ ಪ್ರಮುಖ ಲಕ್ಷಣಗಳಾಗಿವೆ. ಕೆಲವು ಮಕ್ಕಳಲ್ಲಿ ವಾಂತಿ ಅಥವಾ ಅತಿಸಾರವೂ ಕಾಣಿಸಿಕೊಳ್ಳಬಹುದು.

ಕೇವಲ ಲಕ್ಷಣಗಳ ಆಧಾರದ ಮೇಲೆ ಹೆಚ್1ಎನ್1 ಮತ್ತು ಇತರ ವೈರಲ್ ಸೋಂಕುಗಳನ್ನು ಖಚಿತವಾಗಿ ಪ್ರತ್ಯೇಕಿಸಲು ಸಾಧ್ಯವಿಲ್ಲ.

ತಾಪಮಾನ ಮತ್ತು ತೇವಾಂಶದಲ್ಲಿನ ಬದಲಾವಣೆ, ಒಳಾಂಗಣ ಪ್ರದೇಶಗಳಲ್ಲಿ ಜನದಟ್ಟಣೆ, ಗಾಳಿಯ ಹರಿವಿನ ಕೊರತೆ ಹಾಗೂ ಸೋಂಕಿತರೊಂದಿಗೆ ನಿಕಟ ಸಂಪರ್ಕದಿಂದ ಜ್ವರದ ಹರಡುವಿಕೆ ಹೆಚ್ಚಾಗಬಹುದು. ವಾಯುಮಾಲಿನ್ಯ ಹೆಚ್1ಎನ್1ಗೆ ನೇರ ಕಾರಣವಲ್ಲದಿದ್ದರೂ, ಶ್ವಾಸಕೋಶದ ಸಮಸ್ಯೆಗಳನ್ನು ಉಲ್ಬಣಗೊಳಿಸಬಹುದು.

ಎಲ್ಲರಿಗೂ ಹೆಚ್1ಎನ್1 ಪರೀಕ್ಷೆ ಅಗತ್ಯವಿಲ್ಲ. ಆದರೆ ಜ್ವರ ಅಥವಾ ಇತರ ಲಕ್ಷಣಗಳು ತೀವ್ರವಾಗಿದ್ದರೆ, ಮುಂದುವರಿದರೆ ಅಥವಾ ಉಲ್ಬಣಗೊಂಡರೆ ವೈದ್ಯರನ್ನು ಸಂಪರ್ಕಿಸಬೇಕು.

ಉಸಿರಾಟದ ತೊಂದರೆ, ಎದೆ ನೋವು, ತುಟಿ ಅಥವಾ ಮುಖ ನೀಲಿ ಬಣ್ಣಕ್ಕೆ ತಿರುಗುವುದು, ಗೊಂದಲ, ತೀವ್ರ ದೌರ್ಬಲ್ಯ, ದೇಹದಲ್ಲಿ ನೀರಿನ ಕೊರತೆ ಅಥವಾ ರಕ್ತದಲ್ಲಿನ ಆಮ್ಲಜನಕ ಪ್ರಮಾಣ ಕಡಿಮೆಯಾಗುವುದು ಕಂಡುಬಂದರೆ ತಕ್ಷಣ ವೈದ್ಯಕೀಯ ನೆರವು ಪಡೆಯಬೇಕು.

ಮಕ್ಕಳಲ್ಲಿ ನಿರಂತರ ಜ್ವರ, ವೇಗವಾಗಿ ಅಥವಾ ಕಷ್ಟಪಟ್ಟು ಉಸಿರಾಡುವುದು, ಅತಿಯಾದ ನಿದ್ರೆ, ದ್ರವ ಸೇವಿಸಲು ಸಾಧ್ಯವಾಗದಿರುವುದು, ಪದೇಪದೇ ವಾಂತಿ, ಮೂತ್ರ ಪ್ರಮಾಣ ಕಡಿಮೆಯಾಗುವುದು ಅಥವಾ ದೇಹ ನೀಲಿ ಬಣ್ಣಕ್ಕೆ ತಿರುಗುವುದು ಗಂಭೀರ ಎಚ್ಚರಿಕೆಯ ಸಂಕೇತಗಳಾಗಿವೆ.

ಶಾಲೆ, ಕಚೇರಿ ಹಾಗೂ ಸಾರ್ವಜನಿಕ ಸಾರಿಗೆಯಲ್ಲಿ ಸೋಂಕು ಸುಲಭವಾಗಿ ಹರಡಬಹುದು. ಹೀಗಾಗಿ ಅನಾರೋಗ್ಯದಲ್ಲಿರುವವರು ಮನೆಯಲ್ಲೇ ಉಳಿಯುವುದು, ಕೈಗಳನ್ನು ಸ್ವಚ್ಛವಾಗಿ ತೊಳೆಯುವುದು, ಕೆಮ್ಮುವಾಗ ಬಾಯಿ ಮುಚ್ಚಿಕೊಳ್ಳುವುದು ಹಾಗೂ ಒಳಾಂಗಣ ಪ್ರದೇಶಗಳಲ್ಲಿ ಗಾಳಿಯ ಸಂಚಾರಕ್ಕೆ ಆದ್ಯತೆ ನೀಡುವುದು ಅಗತ್ಯ.

## ಇಂದು 'ನೂಪುರ ನರ್ತನ' ನೃತ್ಯೋತ್ಸವ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತೀಯ ಶಾಸ್ತ್ರೀಯ ನೃತ್ಯದ ಸೊಬಗು, ನಿರಂತರ ಕಲಾಸಾಧನೆ ಹಾಗೂ ಯುವ ಪ್ರತಿಭೆಗಳ ನೃತ್ಯಪ್ರತಿಭೆಯನ್ನು ಅನಾವರಣಗೊಳಿಸುವ 'ನೂಪುರ ನರ್ತನ' ನೃತ್ಯೋತ್ಸವ ಆ.22ರಂದು ಬೆಂಗಳೂರಿನ ಮಲ್ಲೇಶ್ವರಂನ 14ನೇ ಕ್ರಾಸ್‌ನ ಸೇವಾ ಸದನದಲ್ಲಿ ನಡೆಯಲಿದೆ.



ನಿರಂತರ ಸ್ಕೂಲ್ ಆಫ್ ಡ್ಯಾನ್ಸ್ ವತಿಯಿಂದ ಆಯೋಜಿಸಿರುವ ಕಾರ್ಯಕ್ರಮವು ಶನಿವಾರ ಬೆಳಿಗ್ಗೆ 10 ಗಂಟೆಗೆ ಆರಂಭವಾಗಲಿದ್ದು, ಆಚಾರ್ಯೆ ಶ್ರೀಮತಿ ಸೌಮ್ಯ ಸೋಮಶೇಖರ್ ಹಾಗೂ ಗುರು ಶ್ರೀ ಸೋಮಶೇಖರ್ ಚೂಡನಾಥ್ ಅವರ ಶಿಷ್ಯೆಯರು ನೃತ್ಯ ಪ್ರದರ್ಶನ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಸಿಯಾ ಶಾನುಭಾಗ್, ಪ್ರೇಕ್ಷಾ ಎಲ್., ಲಾಸ್ಯ ವರ್ಷಿಣಿ ಅಕುರಾತಿ, ಕೃತುಲ್ಯ ಸುರೇಶ್ ಹಾಗೂ ಪೇರಕಂ ಆಧ್ಯಾ ಅವರು ತಮ್ಮ ನೃತ್ಯಪ್ರತಿಭೆಯನ್ನು ಅನಾವರಣಗೊಳಿಸಲಿದ್ದಾರೆ. ಭಾವಾಭಿನಯ, ಲಯಬದ್ಧ ಹೆಜ್ಜೆಗಳು, ವಿವಿಧ ನೃತ್ಯಭಂಗಿಗಳು ಹಾಗೂ ಆಕರ್ಷಕ ವೇಷಭೂಷಣಗಳು ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಲಿವೆ.

ವಿದುಷಿ ಪದ್ಮಿನಿ ಎಸ್. ಉಪಾಧ್ಯಾಯ, ಶ್ರೀ ರುದ್ರಾಕ್ಷ ನಾಟ್ಯಾಲಯದ ಕಲಾತ್ಮಕ ನಿರ್ದೇಶಕಿ ಹಾಗೂ ಆಚಾರ್ಯ ವಿದ್ವಾನ್ ರೂಪೇಶ್ ಕೆ.ಸಿ., ಆರಂಗಂ-ರೂಪೇಶ್ ಇನ್‌ಸ್ಟಿಟ್ಯೂಟ್ ಆಫ್ ಆರ್ಟ್ಸ್‌ನ ಕಲಾತ್ಮಕ ನಿರ್ದೇಶಕರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ನಟ್ಟುವಾಂಗಂ ಅನ್ನು ಆಚಾರ್ಯೆ ಸೌಮ್ಯ ಸೋಮಶೇಖರ್ ನಿರ್ವಹಿಸಲಿದ್ದು, ವಿದುಷಿ ಭಾರತಿ ವೇಣುಗೋಪಾಲ್ ಗಾಯನ, ವಿದ್ವಾನ್ ಜಿ.ಎಸ್. ನಾಗರಾಜ್ ಮೃದಂಗ ಹಾಗೂ ವಿದ್ವಾನ್ ದೀಪಕ್ ಹೆಬ್ಬಾರ್ ಕೊಳಲು ಸಹಕಾರ ನೀಡಲಿದ್ದಾರೆ. ನಿರೂಪಣೆಯನ್ನು ಸುಗ್ಗನಹಳ್ಳಿ ಷಡಾಕ್ಷರಿ ನಿರ್ವಹಿಸಲಿದ್ದಾರೆ ಎಂದು ಆಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 28 ಜೀವಾವಧಿ ಬಂಧಿಗಳ ಬಿಡುಗಡೆಗೆ ಅಸ್ತು

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ವಿವಿಧ ಕೇಂದ್ರ ಕಾರಾಗೃಹಗಳಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಸನ್ನಡತೆ ಹೊಂದಿದ 28 ಅರ್ಹ ಬಂಧಿಗಳನ್ನು ಅವಧಿಪೂರ್ವ ಬಿಡುಗಡೆ ಮಾಡಲು ರಾಜ್ಯ ಸಚಿವ ಸಂಪುಟ ಶುಕ್ರವಾರ ಅನುಮೋದನೆ ನೀಡಿದೆ.

ಜೀವಾವಧಿ ಶಿಕ್ಷಾ ಬಂಧಿಗಳ ಅವಧಿಪೂರ್ವ ಬಿಡುಗಡೆಗೆ ಸಂಬಂಧಿಸಿದಂತೆ ಒಟ್ಟು 45 ಪ್ರಕರಣಗಳನ್ನು ಸಂಪುಟ ಸಭೆಯಲ್ಲಿ ಪರಿಶೀಲಿಸಲಾಗಿದ್ದು, ಸರ್ಕಾರದ ಮಾರ್ಗಸೂಚಿಗಳು, ಬಂಧಿಗಳ ಸನ್ನಡತೆ, ಜೈಲಿನಲ್ಲಿ ಕಳೆದಿರುವ ಅವಧಿ ಸೇರಿದಂತೆ ನಿಗದಿತ ಮಾನದಂಡಗಳ ಆಧಾರದ ಮೇಲೆ ಪ್ರಕರಣಗಳನ್ನು ಪರಿಗಣಿಸಲಾಗಿದೆ.

ಈ ಪೈಕಿ 28 ಬಂಧಿಗಳನ್ನು ಸನ್ನಡತೆ ಆಧಾರದ ಮೇಲೆ ಅವಧಿಪೂರ್ವ ಬಿಡುಗಡೆ ಮಾಡಲು ಅನುಮೋದನೆ ನೀಡಲಾಗಿದೆ. ಮತ್ತೊಂದು ಪ್ರಕರಣದಲ್ಲಿ ಕೇಂದ್ರ ಗೃಹ ಸಚಿವಾಲಯದ ಸಹಮತಿ ಪಡೆದು ಬಿಡುಗಡೆ ಪ್ರಕ್ರಿಯೆ ಮುಂದುವರಿಸಲು ಸಂಪುಟ ಒಪ್ಪಿಗೆ ನೀಡಿದೆ.

ಒಟ್ಟಾರೆ 29 ಜೀವಾವಧಿ ಶಿಕ್ಷಾ ಬಂಧಿಗಳು ಅವಧಿಪೂರ್ವ ಬಿಡುಗಡೆಗೆ ಅರ್ಹರಾಗಿದ್ದು, ಅವರ ಪ್ರಕರಣಗಳನ್ನು ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗಿದೆ ಎಂದು ಸರ್ಕಾರ ತಿಳಿಸಿದೆ.

## 500 ಕೆಪಿಎಸ್ ಶಾಲೆಗಳ ಅಭಿವೃದ್ಧಿಗೆ ರೂ 1,750 ಕೋಟಿ ನೆರವು

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ 500 ಕರ್ನಾಟಕ ಪಬ್ಲಿಕ್ ಶಾಲೆಗಳ ಸಮಗ್ರ ಅಭಿವೃದ್ಧಿಗಾಗಿ ಏಷ್ಯನ್ ಅಭಿವೃದ್ಧಿ ಬ್ಯಾಂಕ್ ಸಹಯೋಗದಲ್ಲಿ 2,500 ಕೋಟಿ ಮೊತ್ತದ ಮಹತ್ವಾಕಾಂಕ್ಷಿ ಯೋಜನೆಗೆ ರಾಜ್ಯ ಸರ್ಕಾರ ಶುಕ್ರವಾರ ಚಾಲನೆ ನೀಡಿದೆ. ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಯೋಜನೆಗೆ ಸಂಬಂಧಿಸಿದ ಒಪ್ಪಂದಕ್ಕೆ ಸಹಿ ಹಾಕಿದರು.



ಯೋಜನೆಯಡಿ ಏಷ್ಯನ್ ಅಭಿವೃದ್ಧಿ ಬ್ಯಾಂಕ್ ರೂ 1,750 ಕೋಟಿ ನೆರವು ನೀಡಲಿದ್ದು, ರಾಜ್ಯ ಸರ್ಕಾರ ರೂ 750 ಕೋಟಿ ಭರಿಸಲಿದೆ. 2026ರಿಂದ 2030ರವರೆಗೆ ಯೋಜನೆ ಅನುಷ್ಠಾನಗೊಳ್ಳಲಿದ್ದು, ಪ್ರತಿ ಕೆಪಿಎಸ್‌ನಲ್ಲಿ ಕನಿಷ್ಠ 1,200 ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸುವ ಗುರಿ ಹೊಂದಲಾಗಿದೆ.

ಎಲ್‌ಕೆಜಿಯಿಂದ 12ನೇ ತರಗತಿವರೆಗೆ ಒಂದೇ ಆವರಣದಲ್ಲಿ ಉಚಿತ ಹಾಗೂ ಗುಣಮಟ್ಟದ ಶಿಕ್ಷಣ, ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ, ದ್ವಿಭಾಷಾ ಬೋಧನೆ, ಕಂಪ್ಯೂಟರ್ ಮತ್ತು ಕೃತಕ ಬುದ್ಧಿಮತ್ತೆ ಶಿಕ್ಷಣ, ಕೌಶಲ್ಯಾಭಿವೃದ್ಧಿ ಹಾಗೂ ವೃತ್ತಿ ಮಾರ್ಗದರ್ಶನಕ್ಕೆ ಆದ್ಯತೆ ನೀಡಲಾಗುತ್ತದೆ. ಸಂಗೀತ, ಸಾಹಿತ್ಯ, ಕ್ರೀಡೆ ಸೇರಿದಂತೆ ಪಠ್ಯೇತರ ಚಟುವಟಿಕೆಗಳಲ್ಲಿನ ಪ್ರತಿಭೆ ಬೆಳೆಸಲು ವಿಶೇಷ ಅವಕಾಶ ಕಲ್ಪಿಸಲಾಗುತ್ತದೆ.

6ನೇ ತರಗತಿಯಿಂದಲೇ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ಹಾಗೂ ವೃತ್ತಿ ಮಾರ್ಗದರ್ಶನ ನೀಡಲು ಕ್ರಮ ಕೈಗೊಳ್ಳಲಾಗುತ್ತದೆ. ಶಿಕ್ಷಕರ ಸಾಮರ್ಥ್ಯ ವೃದ್ಧಿಗೆ ವಿಶೇಷ ತರಬೇತಿ, 10 ಮತ್ತು 12ನೇ ತರಗತಿ ಪರೀಕ್ಷೆಗಳ ಫಲಿತಾಂಶ ಸುಧಾರಣೆಗೆ ಆದ್ಯತೆ ಹಾಗೂ ವಿದ್ಯಾರ್ಥಿಗಳ ಪ್ರಗತಿಯ ನಿರಂತರ ಮೇಲ್ವಿಚಾರಣೆಗೆ ವ್ಯವಸ್ಥೆ ರೂಪಿಸಲಾಗುತ್ತದೆ.

ಪ್ರತಿ ಎರಡು ತಿಂಗಳಿಗೊಮ್ಮೆ ಪೋಷಕರ ಸಭೆ ನಡೆಸುವ ಮೂಲಕ ಶಾಲೆ-ಪೋಷಕರ ಸಂಪರ್ಕ ಬಲಪಡಿಸಲಾಗುತ್ತದೆ. ಡಿಜಿಟಲ್ ಕಲಿಕೆ ಮತ್ತು 21ನೇ ಶತಮಾನದ ಕೌಶಲ್ಯಗಳಿಗೆ ಒತ್ತು ನೀಡುವ ಮೂಲಕ ಗ್ರಾಮೀಣ ಮಕ್ಕಳಿಗೆ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸುವ ಸಾಮರ್ಥ್ಯ ಬೆಳೆಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಈ ಯೋಜನೆ ಕೇವಲ ಶಾಲೆಗಳ ಮೂಲಸೌಕರ್ಯ ಅಭಿವೃದ್ಧಿಗೆ ಸೀಮಿತವಾಗದೆ, ಮುಂದಿನ ಪೀಳಿಗೆಯ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಹಾಗೂ ಉತ್ತಮ ಅವಕಾಶಗಳನ್ನು ಒದಗಿಸುವ ಮೂಲಕ ಕರ್ನಾಟಕದ ಭವಿಷ್ಯ ನಿರ್ಮಿಸುವ ಪ್ರಮುಖ ಹೆಜ್ಜೆಯಾಗಿದೆ.

## ಹಿರಿಯ ನಟಿ ಸಾಹುಕಾರ್ ಜಾನಕಿ ನಿಧನ

1ನೇ ಪುಟದಿಂದ

950ರಲ್ಲಿ ಎಲ್.ವಿ. ಪ್ರಸಾದ್ ನಿರ್ದೇಶನದ ತೆಲುಗು 'ಸಾಹುಕಾರ್' ಚಿತ್ರದ ಮೂಲಕ ಸಿನಿರಂಗಕ್ಕೆ ಕಾಲಿಟ್ಟ ಅವರು, ಆ ಚಿತ್ರದ ಹೆಸರಿನಿಂದಲೇ 'ಸಾಹುಕಾರ್ ಜಾನಕಿ' ಎಂದು ಪ್ರಸಿದ್ಧರಾದರು. ಬಳಿಕ ತೆಲುಗು, ತಮಿಳು, ಕನ್ನಡ ಹಾಗೂ ಮಲಯಾಳಂ ಚಿತ್ರಗಳಲ್ಲಿ ಅಭಿನಯಿಸಿ ದಕ್ಷಿಣ ಭಾರತದ ಪ್ರಮುಖ ನಟಿಯಾಗಿ ಗುರುತಿಸಿಕೊಂಡರು. ಡಾ.ರಾಜ್‌ಕುಮಾರ್ ಅಭಿನಯದ 'ಮಹಿಷಾಸುರ ಮರ್ದಿನಿ' ಸೇರಿದಂತೆ ಹಲವು ಕನ್ನಡ ಚಿತ್ರಗಳಲ್ಲೂ ಅವರು ಗಮನಾರ್ಹ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದರು. ತಮಿಳಿನ 'ಪುದುಯ ಪಾರವೈ', 'ನೀರ್ಕುಮಿಳಿ', 'ಇರು ಕೊಡ', 'ಮೇಜರ್ ಚಂದ್ರಕಾಂತ್', 'ಬಾಮಾ ವಿಜಯಂ' ಹಾಗೂ 'ತಿಲ್ಲು ಮುಲ್ಲು' ಸೇರಿದಂತೆ ಹಲವು ಜನಪ್ರಿಯ ಚಿತ್ರಗಳು ಅವರ ಅಭಿನಯಕ್ಕೆ ಸಾಕ್ಷಿಯಾಗಿವೆ. ಪದ್ಮಶ್ರೀ ಸೇರಿದಂತೆ ಹಲವು ಗೌರವಗಳಿಗೆ ಅವರು ಪಾತ್ರರಾಗಿದ್ದರು.

ಸಾಹುಕಾರ್ ಜಾನಕಿ ನಿಧನಕ್ಕೆ ನಟ ಕಮಲ್ ಹಾಸನ್ ಸೇರಿದಂತೆ ದಕ್ಷಿಣ ಭಾರತದ ಚಿತ್ರರಂಗದ ಗಣ್ಯರು ಸಂತಾಪ ಸೂಚಿಸಿದ್ದಾರೆ. ನಾಲ್ಕು ದಶಕಗಳ ಕಾಲ ಅವರೊಂದಿಗೆ ಹಲವು ಚಿತ್ರಗಳಲ್ಲಿ ಕೆಲಸ ಮಾಡಿದ್ದನ್ನು ಸ್ಮರಿಸಿದ ಕಮಲ್ ಹಾಸನ್, ಜಾನಕಿ ಅವರು ತಮ್ಮ ಪಾಲಿಗೆ ತಾಯಿಯಂತಿದ್ದರು ಎಂದು ನೆನಪಿಸಿಕೊಂಡಿದ್ದಾರೆ.

## ಮಳೆ ಕೊರತೆ: ರಾಜ್ಯದಲ್ಲಿ ಮೋಡ ಬಿತ್ತನೆಗೆ ಸರ್ಕಾರ ಆದೇಶ

1ನೇ ಪುಟದಿಂದ

**ಸೊಲಾಪುರ ಪ್ರಯೋಗದ ಫಲಿತಾಂಶ ಪರಿಗಣನೆ**

ಭಾರತ ಸರ್ಕಾರದ ಭೂ ವಿಜ್ಞಾನ ಸಚಿವಾಲಯದ ಅಧೀನದಲ್ಲಿರುವ ಭಾರತೀಯ ಉಷ್ಣವಲಯದ ಹವಾಮಾನ ಸಂಸ್ಥೆ (ಐಐಟಿಎಂ) ನಡೆಸಿದ 'ಕ್ಲೌಡ್ ಏರೋಸೋಲ್ ಇಂಟರ್ಯಾಕ್ಷನ್ ಅಂಡ್ ಪ್ರಿಸಿಪಿಟೇಶನ್ ಎನ್ಹಾನ್ಸ್‌ಮೆಂಟ್ ಎಕ್ಸ್‌ಪೆರಿಮೆಂಟ್' (CAIPEEX) ಪ್ರಯೋಗಗಳನ್ನೂ ಸರ್ಕಾರ ಪರಿಗಣಿಸಿದೆ.

ಮಹಾರಾಷ್ಟ್ರದ ಸೊಲಾಪುರದ ಮಳೆ ನೆರಳು ಪ್ರದೇಶದಲ್ಲಿ 2018 ಮತ್ತು 2019ರಲ್ಲಿ ನಡೆದ ಪ್ರಯೋಗಗಳಲ್ಲಿ ಕೆಲವು ಪ್ರದೇಶಗಳಲ್ಲಿ ಮಳೆ ಪ್ರಮಾಣದಲ್ಲಿ ಹೆಚ್ಚಳ ದಾಖಲಾಗಿತ್ತು. ಈ ವೈಜ್ಞಾನಿಕ ಅಧ್ಯಯನದ ಅನುಭವವನ್ನು ಕರ್ನಾಟಕದ ಪ್ರಸ್ತುತ ಮೋಡ ಬಿತ್ತನೆ ಯೋಜನೆಗೆ ಪೂರಕವಾಗಿ ಪರಿಗಣಿಸಲಾಗಿದೆ.

ಸೂಕ್ತ ಮೋಡಗಳ ಲಭ್ಯತೆ ಹಾಗೂ ಅನುಕೂಲಕರ ಹವಾಮಾನ ಪರಿಸ್ಥಿತಿ ದೊರೆತ ತಕ್ಷಣ ವಿಳಂಬವಿಲ್ಲದೆ ಕಾರ್ಯಾಚರಣೆ ಆರಂಭಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುತ್ತಿದೆ.

ಮೋಡ ಬಿತ್ತನೆ ಕಾರ್ಯಾಚರಣೆಗೆ ಮುನ್ನ ಆಯ್ದ ಪ್ರದೇಶಗಳಲ್ಲಿ ಹವಾಮಾನ ತಜ್ಞರು ಹಾಗೂ ತಾಂತ್ರಿಕ ತಂಡಗಳು ಮೋಡಗಳ ಚಲನೆ, ತೇವಾಂಶ, ಗಾಳಿಯ ವೇಗ ಮತ್ತು ದಿಕ್ಕಿನ ಕುರಿತು ನಿರಂತರ ಮಾಹಿತಿ ಸಂಗ್ರಹಿಸಲಿವೆ. ಈ ಮಾಹಿತಿಯ ಆಧಾರದ ಮೇಲೆ ವಿಮಾನದ ಹಾರಾಟದ ಮಾರ್ಗ ಹಾಗೂ ಕಾರ್ಯಾಚರಣೆಯ ಸಮಯವನ್ನು ನಿರ್ಧರಿಸಲಾಗುತ್ತದೆ. ಮಳೆ ಕೊರತೆಯಿಂದ ತೀವ್ರವಾಗಿ ಬಾಧಿತ ಪ್ರದೇಶಗಳಿಗೆ ಹೆಚ್ಚಿನ ಆದ್ಯತೆ ನೀಡುವ ಸಾಧ್ಯತೆ ಇದೆ.



ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ವಿಧಾನಸಭೆ ಕಲಾಪದಲ್ಲಿ ಭಾಗವಹಿಸಿದ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜೊತೆ ಹೆಜ್ಜೆ ಹಾಕಿದರು.

## ಹಬ್ಬದ ವೇಳೆಗೆ ಸಕ್ಕರೆ ಕೊರತೆಯಾಗದು: ಸರ್ಕಾರದ ಭರವಸೆ

● ವಿಕ್ರಮ ವಾಹಿನಿ । ನವದೆಹಲಿ

ಹಬ್ಬದ ಋತುವಿನಲ್ಲಿ ಸಕ್ಕರೆಯ ಸಮರ್ಪಕ ಲಭ್ಯತೆ ಖಚಿತಪಡಿಸುವುದರ ಜತೆಗೆ ಬೆಲೆ ಏರಿಕೆ ನಿಯಂತ್ರಿಸಲು ಕೇಂದ್ರ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ. ಜುಲೈ 20ರಂದು ಕೆ.ಜಿ.ಗೆ ₹48.18ರಷ್ಟಿದ್ದ ಸಕ್ಕರೆ ಬೆಲೆ ಆಗಸ್ಟ್ 20ಕ್ಕೆ ₹55.70ಕ್ಕೆ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಸರ್ಕಾರ ಮಾರುಕಟ್ಟೆ ಪರಿಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ.

**ಎಥನಾಲ್‌ನಿಂದ ಬೆಲೆ ಏರಿಕೆ ಅಲ್ಲ**

ಸಕ್ಕರೆ ಬೆಲೆ ಏರಿಕೆಗೆ ಎಥನಾಲ್ ಉತ್ಪಾದನೆಗಾಗಿ ಸಕ್ಕರೆ ಬಳಕೆ ಕಾರಣ ಎಂಬ ವಾದವನ್ನು ಸರ್ಕಾರ ತಳ್ಳಿಹಾಕಿದೆ. ಎಥನಾಲ್‌ಗೆ ಬಳಸಲಾಗುವ ಸಕ್ಕರೆಯ ಪ್ರಮಾಣ 2022-23ರಲ್ಲಿ ಶೇ.12ರಷ್ಟಿದ್ದರೆ, 2025-26ರಲ್ಲಿ ಅದು ಶೇ.9ಕ್ಕೆ ಇಳಿದಿದೆ. ದೇಶದಲ್ಲಿ ಉತ್ಪಾದನೆಯಾಗುವ ಎಥನಾಲ್‌ನ ಸುಮಾರು ಮುಕ್ಕಾಲು ಭಾಗವನ್ನು ಧಾನ್ಯಗಳಿಂದ, ಮುಖ್ಯವಾಗಿ ಮೆಕ್ಕೆಜೋಳದಿಂದ ತಯಾರಿಸಲಾಗುತ್ತಿದೆ ಎಂದು ತಿಳಿಸಿದೆ.

ಕಡಿಮೆ ದೇಶೀಯ ಸಕ್ಕರೆ ಉತ್ಪಾದನೆ, ಹಬ್ಬದ ಹಿನ್ನೆಲೆಯಲ್ಲಿ ಹೆಚ್ಚಿದ ಬೇಡಿಕೆ, ಕಬ್ಬು ಬೆಳೆಗೆ




ರೋಗ ಹಾಗೂ ಅಧಿಕ ಮಳೆಯಿಂದಾದ ಹಾನಿ, ಜಾಗತಿಕ ಪೂರೈಕೆ ಕೊರತೆ ಮತ್ತು ಕೆಲವರ ಸಟ್ಟಾವ್ಯಾಪಾರ ಹಾಗೂ ಕಾಳಸಂತೆ ಸಂಗ್ರಹಣೆ ಬೆಲೆ ಏರಿಕೆಗೆ ಪ್ರಮುಖ ಕಾರಣಗಳಾಗಿವೆ ಎಂದು ಸರ್ಕಾರ ಹೇಳಿದೆ.

**ನಿರೀಕ್ಷೆಗಿಂತ ಕಡಿಮೆ ಉತ್ಪಾದನೆ**

ಪ್ರಸ್ತುತ ಸಕ್ಕರೆ ಹಂಗಾಮಿನಲ್ಲಿ ಸುಮಾರು 306 ಲಕ್ಷ ಟನ್ (ಎಲ್‌ಎಂಟಿ) ಸಕ್ಕರೆ ಉತ್ಪಾದನೆಯಾಗುವ ನಿರೀಕ್ಷೆಯಿದೆ. ಆರಂಭಿಕ ಅಂದಾಜು 343 ಎಲ್‌ಎಂಟಿಯಾಗಿತ್ತು. ಕಬ್ಬಿನಲ್ಲಿ ಕೆಂಪು ಕೊಳೆ ರೋಗ, ಸುಳಿ ನೊಣ ರೋಗ ಹಾಗೂ ಅಧಿಕ ಮಳೆಯಿಂದ ಉಂಟಾದ ಜಲಾವೃತ ಪರಿಸ್ಥಿತಿ ಉತ್ಪಾದನೆ ಕುಸಿತಕ್ಕೆ ಕಾರಣವಾಗಿದೆ.

ಆದಾಗ್ಯೂ, ಅಕ್ಟೋಬರ್‌ನಲ್ಲಿ ಹೊಸ ಕಬ್ಬು ನುರಿಸುವ ಹಂಗಾಮು ಆರಂಭವಾಗುವವರೆಗೆ ದೇಶೀಯ ಬೇಡಿಕೆ ಪೂರೈಸಲು ಅಗತ್ಯವಿರುವಷ್ಟು ಸಕ್ಕರೆ ದಾಸ್ತಾನು ಲಭ್ಯವಿದೆ ಎಂದು ಸರ್ಕಾರ ಸ್ಪಷ್ಟಪಡಿಸಿದೆ.

**ಜಾಗತಿಕ ಮಾರುಕಟ್ಟೆಯಲ್ಲೂ ಬೆಲೆ ಏರಿಕೆ**

ಸಕ್ಕರೆ ಬೆಲೆ ಏರಿಕೆ ಭಾರತಕ್ಕೆ ಮಾತ್ರ ಸೀಮಿತವಾಗಿಲ್ಲ. 2026-27ರಲ್ಲಿ ಜಾಗತಿಕ ಸಕ್ಕರೆ ಕೊರತೆ ಸುಮಾರು 33 ಎಲ್‌ಎಂಟಿ ಇರಲಿದೆ ಎಂದು ಅಂದಾಜಿಸಲಾಗಿದೆ. ಇದರ ಪರಿಣಾಮವಾಗಿ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಸಕ್ಕರೆ ಬೆಲೆ ಜೂನ್ 30ರಂದು ಟನ್‌ಗೆ 474 ಡಾಲರ್‌ನಿಂದ ಆಗಸ್ಟ್ 20ಕ್ಕೆ 552 ಡಾಲರ್‌ಗೆ ಏರಿಕೆಯಾಗಿದೆ.

**ಎಥನಾಲ್‌ನಿಂದ ಕಾರ್ಖಾನೆಗಳಿಗೆ ಬಲ**

ಹೆಚ್ಚುವರಿ ಸಕ್ಕರೆಯನ್ನು ಎಥನಾಲ್ ಉತ್ಪಾದನೆಗೆ ಬಳಸುವ ನೀತಿ ಸಕ್ಕರೆ ಕಾರ್ಖಾನೆಗಳ ಹಣಕಾಸು ಸ್ಥಿತಿ ಸುಧಾರಿಸಲು ನೆರವಾಗಿದೆ ಎಂದು ಸರ್ಕಾರ ತಿಳಿಸಿದೆ. ಆಗಸ್ಟ್ 20ರ ವೇಳೆಗೆ 2025-26ರ ಸಕ್ಕರೆ ಹಂಗಾಮಿನ ಕಬ್ಬಿನ ಬಾಕಿ ಮೊತ್ತದ ಶೇ.97ರಷ್ಟು ರೈತರಿಗೆ ಪಾವತಿಸಲಾಗಿದೆ.

**ಕಾಳಸಂತೆ ತಡೆಗೆ ದಾಸ್ತಾನು ಮಿತಿ**

ಬೆಲೆ ಏರಿಕೆ ತಡೆಯಲು ಆಗಸ್ಟ್ 1ರಿಂದ ನವೆಂಬರ್ 30ರವರೆಗೆ ಸಕ್ಕರೆ ವ್ಯಾಪಾರಿಗಳಿಗೆ ಗರಿಷ್ಠ 400 ಟನ್ ದಾಸ್ತಾನು ಮಿತಿ ವಿಧಿಸಲಾಗಿದೆ. ಸೆಪ್ಟೆಂಬರ್ 1ರಿಂದ ಸಗಟು ಗ್ರಾಹಕರು 15 ದಿನಗಳ ಬಳಕೆಗೆ ಮೀರಿದ ಸಕ್ಕರೆ ದಾಸ್ತಾನು ಇಟ್ಟುಕೊಳ್ಳುವುದಕ್ಕೂ ನಿರ್ಬಂಧ ಹೇರಲಾಗಿದೆ.

**10 ಎಲ್‌ಎಂಟಿ ಸಕ್ಕರೆ ಸುಂಕಮುಕ್ತ ಆಮದು**

ದೇಶೀಯ ಪೂರೈಕೆ ಹೆಚ್ಚಿಸಲು ಮುನ್ನೆಚ್ಚರಿಕಾ ಕ್ರಮವಾಗಿ 10 ಎಲ್‌ಎಂಟಿ ಕಚ್ಚಾ ಸಕ್ಕರೆಯನ್ನು ಸುಂಕಮುಕ್ತವಾಗಿ ಆಮದು ಮಾಡಿಕೊಳ್ಳಲು ಸರ್ಕಾರ ನಿರ್ಧರಿಸಿದೆ. ಜತೆಗೆ ಅಕ್ಟೋಬರ್ 15ರಿಂದ ಕಬ್ಬು ನುರಿಸುವ ಪ್ರಕ್ರಿಯೆ ಆರಂಭಿಸುವಂತೆ ರಾಜ್ಯಗಳು ಮತ್ತು ಸಕ್ಕರೆ ಕಾರ್ಖಾನೆಗಳಿಗೆ ಸಲಹೆ ನೀಡಲಾಗಿದೆ.

ಇದರಿಂದ ಅಕ್ಟೋಬರ್‌ನಲ್ಲಿ ಸಾಮಾನ್ಯವಾಗಿ ಉತ್ಪಾದನೆಯಾಗುವ 3-4 ಎಲ್‌ಎಂಟಿ ಸಕ್ಕರೆಯ ಬದಲು ಸುಮಾರು 10 ಎಲ್‌ಎಂಟಿ ಉತ್ಪಾದನೆ ಸಾಧ್ಯವಾಗಲಿದ್ದು, ಹಬ್ಬದ ಅವಧಿಯಲ್ಲಿ ಮಾರುಕಟ್ಟೆಗೆ ಹೆಚ್ಚಿನ ಪ್ರಮಾಣದ ಸಕ್ಕರೆ ಲಭ್ಯವಾಗುವ ನಿರೀಕ್ಷೆಯಿದೆ.

PRGI NO: KARKAN/2018/78481

# ಟನ್‌ಗಟ್ಟಲೆ ಅನ್ನದ ತ್ಯಾಜ್ಯ ಅಕ್ರಮ ವಿಲೇವಾರಿ

● ವಿಕ್ರಮ ವಾಹಿನಿ | ದೇವನಹಳ್ಳಿ

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಟನ್‌ಗಟ್ಟಲೆ ಅನ್ನದ ತ್ಯಾಜ್ಯವನ್ನು ಟ್ರ್ಯಾಕ್ಟರ್ ಮೂಲಕ ಅಕ್ರಮವಾಗಿ ಸುರಿದು ವಿಲೇವಾರಿ ಮಾಡುತ್ತಿದ್ದ ಪ್ರಕರಣವನ್ನು ಅಧಿಕಾರಿಗಳು ತಡೆದು, ಟ್ರ್ಯಾಕ್ಟರ್ ಚಾಲಕನ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕನ್ನಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆಂಪತಿಮ್ಮನಹಳ್ಳಿ ಗ್ರಾಮದ ಸಮೀಪ ಆಹಾರ ತ್ಯಾಜ್ಯವನ್ನು ಸುರಿಯುತ್ತಿರುವ ಬಗ್ಗೆ ಗ್ರಾಮಸ್ಥರಿಂದ ಮಾಹಿತಿ ಬಂದ ಹಿನ್ನೆಲೆಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀನಿವಾಸ್ ನೇತೃತ್ವದ ಸಿಬ್ಬಂದಿ ಸ್ಥಳಕ್ಕೆ ತೆರಳಿ ಪರಿಶೀಲಿಸಿದರು. ಈ ವೇಳೆ ಟ್ರ್ಯಾಕ್ಟರ್ ಟ್ರೇಲರ್‌ನಲ್ಲಿ ತುಂಬಿಕೊಂಡು ಬಂದಿದ್ದ ಅಪಾರ ಪ್ರಮಾಣದ ಕೊಳೆತ ಅನ್ನವನ್ನು ಸ್ಥಳದಲ್ಲಿ ಸುರಿಯುತ್ತಿದ್ದುದನ್ನು ತಡೆದರು.

ಅಕ್ರಮವಾಗಿ ತ್ಯಾಜ್ಯ ವಿಲೇವಾರಿ ಮಾಡುತ್ತಿದ್ದ ಟ್ರ್ಯಾಕ್ಟರ್ ಹಾಗೂ ಚಾಲಕನ ವಿರುದ್ಧ ಚಿಕ್ಕಜಾಲ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ. ಆಹಾರ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಸುರಿಯುವುದರಿಂದ ದುರ್ವಾಸನೆ, ಕೊಳಕು ಹಾಗೂ ಸೊಳ್ಳೆ–ನೊಣಗಳ ಹಾವಳಿ ಹೆಚ್ಚಾಗಿ ಸಾರ್ವಜನಿಕ ಆರೋಗ್ಯಕ್ಕೆ ತೊಂದರೆಯಾಗುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.


ಟನ್‌ಗಟ್ಟಲೆ ಅನ್ನವನ್ನು ನಿರ್ಲಕ್ಷ್ಯವಾಗಿ ಬಿಸಾಡಿರುವುದಕ್ಕೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಒಂದು ಕಡೆ ಅನೇಕರು ಒಂದು ಹೊತ್ತಿನ ಊಟಕ್ಕೂ ಪರದಾಡುತ್ತಿರುವಾಗ ಆಹಾರವನ್ನು ಈ ರೀತಿ ವ್ಯರ್ಥ ಮಾಡುವುದು ಖಂಡನೀಯ ಎಂದು ಅವರು ಹೇಳಿದ್ದಾರೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದ್ದು, ಎಲ್ಲೆಂದರಲ್ಲಿ ಕಸ ಹಾಗೂ ಆಹಾರ ತ್ಯಾಜ್ಯ ಸುರಿಯದಂತೆ ಸಾರ್ವಜನಿಕರು ಸಹಕರಿಸಬೇಕು ಎಂದು ಪಿಡಿಒ ಶ್ರೀನಿವಾಸ್ ಮನವಿ ಮಾಡಿದ್ದಾರೆ. ಮುಂದಿನ ದಿನಗಳಲ್ಲಿಯೂ ಅಕ್ರಮ ತ್ಯಾಜ್ಯ ವಿಲೇವಾರಿ ವಿರುದ್ಧ ಕ್ರಮ ಮುಂದುವರಿಸಲಾಗುವುದು ಎಂದು ಪಂಚಾಯಿತಿ ಅಧಿಕಾರಿಗಳು ತಿಳಿಸಿದ್ದಾರೆ.

# ಕ್ಯಾನ್ಸರ್ ಔಷಧ ಸಂಶೋಧನೆಗೆ ಕೃತಕ ಬುದ್ಧಿಮತ್ತೆ ನೆರವು

● ವಿಕ್ರಮ ವಾಹಿನಿ | ಬೆಂಗಳೂರು

ಕ್ಯಾನ್ಸರ್ ಚಿಕಿತ್ಸೆಗೆ ಹೊಸ ಔಷಧ ಕಂಡುಹಿಡಿಯುವ ಸಂಶೋಧನೆಯಲ್ಲಿ ಬೆಂಗಳೂರಿನ 'ಶ್ರಾವತಿ ಎಐ' ಸಂಸ್ಥೆ ಮಹತ್ವದ ಹೆಜ್ಜೆ ಇಟ್ಟಿದೆ. ಅಮೆರಿಕದ ಮೇಯೊ ಕ್ಲಿನಿಕ್ ಸಂಶೋಧಕರ ಸಹಯೋಗದಲ್ಲಿ ಪ್ಯಾಂಕ್ರಿಯಾಸ್ ಕ್ಯಾನ್ಸರ್‌ಗೆ ಪ್ರಮುಖ ಕಾರಣವಾಗಿರುವ ಜಿಐಪಿಸಿ1 ಪ್ರೋಟೀನ್ ಅನ್ನು ಗುರಿಯಾಗಿಸುವ ಸಣ್ಣ ಅಣುವಿನ ಪ್ರತಿಬಂಧಕವನ್ನು ಗುರುತಿಸಲಾಗಿದೆ. ಸಂಶೋಧನಾ ವರದಿ ಜುಲೈ 31ರಂದು 'ಸೆಲ್ ರಿಪೋರ್ಟ್ಸ್' ವೈಜ್ಞಾನಿಕ ಪತ್ರಿಕೆಯಲ್ಲಿ ಪ್ರಕಟವಾಗಿದೆ.

ಸಂಶೋಧಕರು ಸುಮಾರು 40 ಸಾವಿರ ರಾಸಾಯನಿಕ ಸಂಯುಕ್ತಗಳನ್ನು ಕೃತಕ ಬುದ್ಧಿಮತ್ತೆ ಹಾಗೂ ಗಣಕ ಆಧಾರಿತ ತಂತ್ರಜ್ಞಾನಗಳ



ಮೂಲಕ ಪರಿಶೀಲಿಸಿ, ಜಿಐಪಿಸಿ1 ಪ್ರೋಟೀನ್‌ನ ಕಾರ್ಯವನ್ನು ತಡೆಯಬಲ್ಲ ಸೂಕ್ತ ಅಣುವನ್ನು ಆಯ್ಕೆ ಮಾಡಿದ್ದಾರೆ. ಬಳಿಕ ಅದನ್ನು ಪ್ರಯೋಗಾಲಯದಲ್ಲಿ ತಯಾರಿಸಿ ಕ್ಯಾನ್ಸರ್ ಕೋಶಗಳು ಹಾಗೂ ಪ್ರಾಣಿಗಳ ಮಾದರಿಗಳಲ್ಲಿ ಪರೀಕ್ಷಿಸಲಾಗಿದೆ.

ಪೂರ್ವಮಾನವ ಪರೀಕ್ಷೆಗಳಲ್ಲಿ ಈ ಅಣುವು ಪ್ಯಾಂಕ್ರಿಯಾಸ್ ಕ್ಯಾನ್ಸರ್ ಗೆಡ್ಡೆಯ ಬೆಳವಣಿಗೆಯನ್ನು ಕಡಿಮೆ ಮಾಡಿರುವುದು ಕಂಡುಬಂದಿದೆ.

ಪ್ಯಾಂಕ್ರಿಯಾಸ್‌ನ ನಾಳೀಯ ಗ್ರಂಥಿ ಕ್ಯಾನ್ಸರ್ ಅತ್ಯಂತ ಆಕ್ರಮಣಕಾರಿ ಕ್ಯಾನ್ಸರ್‌ಗಳಲ್ಲಿ ಒಂದಾಗಿದ್ದು, ತಡವಾಗಿ ಪತ್ತೆಯಾಗುವುದರಿಂದ ಚಿಕಿತ್ಸೆ ಸವಾಲಿನದ್ದಾಗಿದೆ. ಹೀಗಾಗಿ ಜಿಐಪಿಸಿ1 ಅನ್ನು ಗುರಿಯಾಗಿಸುವ ಈ ಸಂಶೋಧನೆ ಮಹತ್ವ ಪಡೆದಿದೆ.

ಆದರೆ, ಈ ಔಷಧವನ್ನು ಇನ್ನೂ ಮಾನವರ ಮೇಲೆ ಪರೀಕ್ಷಿಸಲಾಗಿಲ್ಲ. ಸುರಕ್ಷತೆ ಮತ್ತು ಪರಿಣಾಮಕಾರಿತ್ವದ ಕುರಿತು ಹೆಚ್ಚಿನ ಪೂರ್ವಮಾನವ ಪರೀಕ್ಷೆಗಳ ಬಳಿಕವಷ್ಟೇ ಮಾನವರ ಮೇಲಿನ ವೈದ್ಯಕೀಯ ಪ್ರಯೋಗಗಳಿಗೆ ಅವಕಾಶ ದೊರೆಯಲಿದೆ. ಹೀಗಾಗಿ ಇದನ್ನು ಸದ್ಯಕ್ಕೆ ಸಿದ್ಧ ಕ್ಯಾನ್ಸರ್ ಔಷಧ ಎಂದು ಪರಿಗಣಿಸಲು ಸಾಧ್ಯವಿಲ್ಲ.

# ಗದಗದಲ್ಲಿ ಇಬ್ಬರು

## ಬಾಂಗ್ಲಾದೇಶಿ ಶಂಕಿತರು ವಶ

● ವಿಕ್ರಮ ವಾಹಿನಿ | ಗದಗ

ಹರ್ತಿ ಗ್ರಾಮದ ಹೊರವಲಯದಲ್ಲಿ ನಿರ್ಮಾಣ ಹಂತದಲ್ಲಿರುವ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಟ್ಟಡ ಕಾಮಗಾರಿ ಸ್ಥಳದಲ್ಲಿ ಬಾಂಗ್ಲಾದೇಶ ಮೂಲದವರೆಂದು ಶಂಕಿಸಲಾದ ಇಬ್ಬರು ಕೂಲಿ ಕಾರ್ಮಿಕರನ್ನು ಗದಗ ಗ್ರಾಮೀಣ ಠಾಣೆ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಸಕೀಬ್ ಸಹೀನ್ (26) ಮತ್ತು ದಿಲಾವರ್ ಹುಸೇನ್ (22) ಕಳೆದ ಎರಡು ತಿಂಗಳಿಂದ ಕಾಮಗಾರಿ ಸ್ಥಳದಲ್ಲಿ ಕೆಲಸ ಮಾಡುತ್ತಿದ್ದರು ಎನ್ನಲಾಗಿದೆ. ಪಶ್ಚಿಮ ಬಂಗಾಳದಿಂದ ಬಂದಿದ್ದ ಕೂಲಿ ಕಾರ್ಮಿಕರ ತಂಡದೊಂದಿಗೆ ಇಬ್ಬರೂ ಗದಗ ಜಿಲ್ಲೆಗೆ ಆಗಮಿಸಿ ಕೆಲಸಕ್ಕೆ ಸೇರಿಕೊಂಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಇಬ್ಬರ ಬಳಿಯೂ ಪಶ್ಚಿಮ ಬಂಗಾಳದ ವಿಳಾಸ ಹೊಂದಿರುವ ಆಧಾರ್ ಕಾರ್ಡ್‌ಗಳು ಪತ್ತೆಯಾಗಿವೆ. ಆದರೆ, ಅವರ ಜನ್ಮಸ್ಥಳ, ದಾಖಲೆಗಳು ಹಾಗೂ ಇತರ ವಿವರಗಳನ್ನು ಪರಿಶೀಲಿಸುವ ವೇಳೆ ಅವರು ಬಾಂಗ್ಲಾದೇಶ ಮೂಲದವರಾಗಿರಬಹುದೆಂಬ ಶಂಕೆ ಪೊಲೀಸರಿಗೆ ವ್ಯಕ್ತವಾಗಿದೆ. ಹೀಗಾಗಿ ದಾಖಲೆಗಳ ಸತ್ಯಾಸತ್ಯತೆ ಮತ್ತು ಅವರ ನೈಜ ಹಿನ್ನೆಲೆ ಪತ್ತೆಹಚ್ಚಲು ತನಿಖೆ ಮುಂದುವರಿದಿದೆ.

ವಿಚಾರಣೆ ವೇಳೆ ಇಬ್ಬರೂ ಈ ಹಿಂದೆ ಬೆಂಗಳೂರು, ಮಂಗಳೂರು ಹಾಗೂ ಗಂಗಾವತಿ ಸೇರಿದಂತೆ ವಿವಿಧೆಡೆ ಕೂಲಿ ಕೆಲಸ ಮಾಡಿದ್ದಾಗಿ ಮಾಹಿತಿ ನೀಡಿದ್ದಾರೆ ಎನ್ನಲಾಗಿದೆ. ಅವರು ಭಾರತಕ್ಕೆ ಯಾವ ಮಾರ್ಗದ ಮೂಲಕ ಪ್ರವೇಶಿಸಿದರು, ಎಲ್ಲೆಲ್ಲಿ ವಾಸವಾಗಿದ್ದರು ಹಾಗೂ ಗದಗಕ್ಕೆ ಯಾರ ಸಂಪರ್ಕದ ಮೂಲಕ ಬಂದು ಕೆಲಸಕ್ಕೆ ಸೇರಿದರು ಎಂಬ ಬಗ್ಗೆಯೂ ಪೊಲೀಸರು ಮಾಹಿತಿ ಕಲೆಹಾಕುತ್ತಿದ್ದಾರೆ.

ಅವರನ್ನು ಕೆಲಸಕ್ಕೆ ಕರೆತಂದವರು ಯಾರು, ಕಾರ್ಮಿಕರ ದಾಖಲೆಗಳನ್ನು ಪರಿಶೀಲಿಸಲಾಗಿತ್ತೇ ಹಾಗೂ ಆಧಾರ್ ಸೇರಿದಂತೆ ಇತರ ಗುರುತಿನ ದಾಖಲೆಗಳು ನೈಜವೇ ಎಂಬುದರ ಬಗ್ಗೆಯೂ ತನಿಖೆ ನಡೆಯುತ್ತಿದೆ.

ಈ ಕುರಿತು ಗದಗ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಇಬ್ಬರ ದಾಖಲೆಗಳು ಮತ್ತು ಹಿನ್ನೆಲೆಯ ಕುರಿತು ಹೆಚ್ಚಿನ ಪರಿಶೀಲನೆ ನಡೆಸಲಾಗುತ್ತಿದೆ.

"ಇಬ್ಬರು ಬಾಂಗ್ಲಾದೇಶ ಮೂಲದವರು ಎಂಬ ಶಂಕೆಯ ಹಿನ್ನೆಲೆಯಲ್ಲಿ ಅವರನ್ನು ವಶಕ್ಕೆ ಪಡೆದು ದಾಖಲೆಗಳು ಹಾಗೂ ಹಿನ್ನೆಲೆಯ ಕುರಿತು ತನಿಖೆ ನಡೆಸಲಾಗುತ್ತಿದೆ. ತನಿಖೆ ಪೂರ್ಣಗೊಂಡ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು," ಎಂದು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ತಿಳಿಸಿದ್ದಾರೆ.

# ‘ಸಾಮಾನ್ಯನೂ ಪಂಚ ಭೂತಗಳ ಮೇಲೆ ನಿಯಂತ್ರಣವನ್ನು ಸಾಧಿಸಬಹುದು’

● ವಿಕ್ರಮ ವಾಹಿನಿ | ಗೋಕರ್ಣ

ಪಂಚ ಭೂತಗಳ ಮೇಲೆ ನಾವೂ ನಿಯಂತ್ರಣವನ್ನು ಸಾಧಿಸಬಹುದು. ಪ್ರಕೃತಿ ನಮಗೆ ಕೊಟ್ಟದ್ದನ್ನು ಕಾಲ ಹಾಗೂ ದೇಶಕ್ಕೆ ತಕ್ಕಂತೆ ಮತ್ತು ಶಾಸ್ತ್ರ ನಿಯಮದಂತೆ ಆಹಾರವನ್ನು ಸೇವಿಸಿದರೆ ಹಾಗೂ ನಿಯಮ ಬದ್ಧವಾದ ಉಪವಾಸದಿಂದ ಸಾಮಾನ್ಯನೂ ಕೂಡ ಅಗ್ನಿಜಯವನ್ನು ಸಾಧಿಸಬಹುದು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 21.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಮಹಾನ್ ವ್ಯಕ್ತಿಗಳ ಜೀವನದಲ್ಲಿಯೂ ಕಷ್ಟಗಳು ಬರುತ್ತವೆ ಎಂದ ಶ್ರೀಗಳು, ನಳ – ದಮಯಂತಿಯ ಚರಿತ್ರೆಯ ಮೂಲಕ ನಳನಿಗೆ ಅಗ್ನಿಯ ಮೇಲಿದ್ದ ಪ್ರಭಾವ ಹಾಗೂ ಬಲವನ್ನು ವಿವರಿಸಿ, ನಳನು ಸಂಕಷ್ಟಗಳ ಸರಮಾಲೆಯ ಮಧ್ಯದಲ್ಲಿದ್ದಾಗ ಆತನ ಮಹತ್ವ ಮತ್ತು ಸಾಮರ್ಥ್ಯ ಜಗತ್ತಿನ ಮುಂದೆ ಪ್ರಕಟವಾಯಿತು. ಪಂಚಭೂತಗಳ ಮೇಲೆ ನಳನು ಸಾಧಿಸಿಕೊಂಡಿದ್ದ ನಿಯಂತ್ರಣದಿಂದ ಇದು ಸಾಧ್ಯವಾಯಿತು ಎಂದು ಅಭಿಪ್ರಾಯಪಟ್ಟರು.

ತೇಗು ಬಂದ ನಂತರ ಊಟವನ್ನು ನಿಲ್ಲಿಸಬೇಕು ಎನ್ನಲಾಗಿದೆ. ಆದರೆ ಆ ಸಮಯದಲ್ಲಿ ಎಲೆಯ ಮೇಲೆ ಉಳಿದಿರುವ ಆಹಾರವನ್ನು ಹಾಗೆಯೇ ಬಿಡಬೇಕೇ? ಎಂಬ ಪ್ರಶ್ನೆಗೆ ಉತ್ತರಿಸಿದ ಶ್ರೀಗಳು, ನಮ್ಮ ದೇಹಕ್ಕೆ ಅಗತ್ಯಕ್ಕಿಂತ ಹೆಚ್ಚಿನ ಆಹಾರವನ್ನು ಎಲೆಗೆ ಹಾಕಿಸಿಕೊಳ್ಳಬಾರದು. ಬಡಿಸುವವರಿಗೂ ಈ ಬಗ್ಗೆ ಪರಿವು ಅಗತ್ಯ. ಬಾಳೆ ಎಲೆಯಲ್ಲಿ ಊಟವನ್ನು ಬಿಟ್ಟರೆ ಅದು ವ್ಯರ್ಥ. ಆದರೆ ಹೆಚ್ಚಾದ ಆಹಾರವನ್ನು ನಾವು ಸೇವಿಸಿದರೆ ಅದು ಅನರ್ಥಕ್ಕೆ ಕಾರಣ. ಒಂದೊಮ್ಮೆ ಎಲೆಯಲ್ಲಿ ಆಹಾರವನ್ನು ವ್ಯರ್ಥ ಮಾಡಿದರೆ ಅದು ನಿಜವಾಗಿ ವ್ಯರ್ಥವಲ್ಲ. ಅದು ಬೇರೆ ಯಾವುದೋ ಜೀವಿಯ ಪಾಲಿಗೆ ಆಹಾರವಾಗುತ್ತದೆ ಎಂದು ತಿಳಿಸಿದರು.

ಜೀವನದಲ್ಲಿ ಆರೋಗ್ಯ, ಶಾಂತಿ ಮತ್ತು ಆಧ್ಯಾತ್ಮಿಕ ಬೆಳವಣಿಗೆ ಬೇಕಾದರೆ ಆಹಾರದ ಬಗ್ಗೆ ಜವಾಬ್ದಾರಿ ಇರಬೇಕು, ಜಠರಾಗ್ನಿಯನ್ನು



ಕಾಪಾಡಬೇಕು ಮತ್ತು ಅನ್ನವನ್ನು ದೇವಸ್ವರೂಪವೆಂದು ಭಾವಿಸಿ ಗೌರವಿಸಬೇಕು ಎಂದು ಸಮಾಜಕ್ಕೆ ಕರೆನೀಡಿದರು.

ಶ್ರೀಕ್ಷೇತ್ರ ಹಟ್ಟಿಯಂಗಡಿಯ ಧರ್ಮದರ್ಶಿಗಳಾದ ವೇ.ಮೂ. ಬಾಲಚಂದ್ರ ಭಟ್ಟ ಕುಟುಂಬದವರು ಗುರುಭಿಕ್ಷಾ ಸೇವೆಯನ್ನು ಸಮರ್ಪಿಸಿದರು. ಜೆ.ಡಿ.ಎಸ್ ಉತ್ತರ ಕನ್ನಡ ಜಿಲ್ಲಾ ಅಧ್ಯಕ್ಷ ಸೂರಜ್ ನಾಯ್ಕ ಸೋನಿ, ಶೇಖರ ನಾಯ್ಕ ಶ್ರೀಗಳ ಆಶೀರ್ವಾದ ಪಡೆದರು. ಮಂಜುನಾಥ ಸುವರ್ಣಗದ್ದೆ, ಶಾಂತಾರಾಮ ಹೆಗಡೆ ಕೊಂಡದಕುಳಿ, ದಿನಪ್ರಧಾನರಾಗಿ ಆರ್.ಎಸ್. ಹೆಗಡೆ ಹರಗಿ ದಂಪತಿಗಳು ಉಪಸ್ಥಿತರಿದ್ದರು.

ನಾಮಧಾರಿ ಸಮಾಜದಿಂದ ಸ್ವರ್ಣಪಾದುಕಾ ಪೂಜೆ: ಪಾರಂಪರಿಕವಾಗಿ ಶ್ರೀರಾಮಚಂದ್ರಾಪುರ ಮಠಕ್ಕೆ ನಡೆದುಕೊಳ್ಳುತ್ತಿರುವ ನಾಮಧಾರಿ ಸಮಾಜದ ಗುರುಬಂಧುಗಳಿಂದ ಸ್ವರ್ಣಪಾದುಕಾ ಪೂಜೆ ನಡೆಯಿತು. ಪೂಜೆಯನ್ನು ಸ್ವೀಕರಿಸಿ ಸಮಾಜವನ್ನು ಆಶೀರ್ವದಿಸಿದ ಶ್ರೀಗಳು, ಪರಸ್ಪರ ಗುರು ಶಿಷ್ಯರ ಭೇಟಿ ಆಗಾಗ ನಡೆದಾಗ ಬಾಂಧವ್ಯ ಗಟ್ಟಿಯಾಗಲು ಸಾಧ್ಯ. ಗುರುಪರಂಪರೆಯ ಅನುಗ್ರಹ ಈ ಸಮಾಜದ ಮೇಲೆ ಸದಾ ಇರಲಿದ್ದು, ಸಮಾಜದ ಆಗುಹೋಗುಗಳ ಜೊತೆಗೆ ಶ್ರೀಮಠ ಸದಾ ಇರಲಿದೆ ಎಂದರು. ನಾಮಧಾರಿ ಸಮಾಜದ ಕುಮಟಾ ತಾಲೂಕಾ ಅಧ್ಯಕ್ಷ ಅರುಣಕುಮಾರ ಜಿ. ನಾಯ್ಕ, ಶೇಖರ ನಾಯ್ಕ, ಹರೀಶ ನಾಯ್ಕ, ಅಶೋಕ ನಾಯ್ಕ ಸೇರಿದಂತೆ ಸಮಾಜ ಬಂಧುಗಳು ಉಪಸ್ಥಿತರಿದ್ದರು.

# ಕಾರಿನಲ್ಲಿ ತಮಿಳುನಾಡಿಗೆ ಸಾಗಿಸುತ್ತಿದ್ದ

## ರೂ 9 ಕೋಟಿ ನಗದು ಜಪ್ತಿ

● ವಿಕ್ರಮ ವಾಹಿನಿ | ಬೆಂಗಳೂರು

ಬೆಂಗಳೂರಿನಿಂದ ತಮಿಳುನಾಡಿನ ಹೊಸೂರಿಗೆ ಕಾರಿನಲ್ಲಿ ಅಕ್ರಮವಾಗಿ ಸಾಗಿಸಲಾಗುತ್ತಿದ್ದ ರೂ 9 ಕೋಟಿ ನಗದನ್ನು ಆದಾಯ ತೆರಿಗೆ ಇಲಾಖೆ ಹಾಗೂ ಎಲೆಕ್ಟ್ರಾನಿಕ್ ಸಿಟಿ ಪೊಲೀಸರು ಜಂಟಿ ಕಾರ್ಯಾಚರಣೆಯಲ್ಲಿ ಜಪ್ತಿ ಮಾಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ.

ತಮಿಳುನಾಡು ಮೂಲದ ಆಭರಣ ಮಳಿಗೆಗೆ ಸಂಬಂಧಿಸಿದ ಸಚಿನ್ (42) ಹಾಗೂ ಮತ್ತೋರ್ವ ವ್ಯಕ್ತಿಯನ್ನು ವಶಕ್ಕೆ ಪಡೆಯಲಾಗಿದ್ದು, ಇಬ್ಬರನ್ನೂ ಆದಾಯ ತೆರಿಗೆ ಅಧಿಕಾರಿಗಳಿಗೆ ಹಸ್ತಾಂತರಿಸಲಾಗಿದೆ ಎಂದು ಎಲೆಕ್ಟ್ರಾನಿಕ್ ಸಿಟಿ ವಿಭಾಗದ ಡಿಸಿಪಿ ಎಂ. ನಾರಾಯಣ್ ತಿಳಿಸಿದ್ದಾರೆ.

ಆಗಸ್ಟ್ 18ರ ರಾತ್ರಿ ಬೆಂಗಳೂರಿನಿಂದ ಹೊಸೂರು ಕಡೆಗೆ ಕೆಎಲ್ 20 ಟಿ 8629 ನೋಂದಣಿ ಸಂಖ್ಯೆಯ ಹ್ಯುಂಡೈ ಕ್ರೆಟಾ ಕಾರಿನಲ್ಲಿ ಭಾರಿ ಪ್ರಮಾಣದ ನಗದು ಸಾಗಿಸಲಾಗುತ್ತಿದೆ ಎಂಬ ಖಚಿತ ಮಾಹಿತಿ ಆದಾಯ ತೆರಿಗೆ ಇಲಾಖೆಗೆ ಲಭಿಸಿತ್ತು. ಮಾಹಿತಿ ಆಧರಿಸಿ ಎಲೆಕ್ಟ್ರಾನಿಕ್ ಸಿಟಿ ಪೊಲೀಸರು ಬಿಇಟಿಎಲ್ ಟೋಲ್ ಬಳಿಕದ ಸಿಗ್ನಲ್ ಬಳಿ ರಾತ್ರಿ 10.30ರ ಸುಮಾರಿಗೆ ಕಾರನ್ನು ತಡೆದು ಪರಿಶೀಲಿಸಿದ್ದಾರೆ.

ಕಾರಿನಲ್ಲಿದ್ದ ಇಬ್ಬರನ್ನು ಹಾಗೂ ವಾಹನವನ್ನು ಆದಾಯ ತೆರಿಗೆ ಅಧಿಕಾರಿಗಳ ವಶಕ್ಕೆ ಒಪ್ಪಿಸಲಾಗಿದ್ದು, ಪರಿಶೀಲನೆ ವೇಳೆ ಸೂಟ್‌ಕೇಸ್‌ನಲ್ಲಿ ರೂ 9 ಕೋಟಿ ನಗದು ಪತ್ತೆಯಾಗಿದೆ.


ನಂತರ ಆದಾಯ ತೆರಿಗೆ ಅಧಿಕಾರಿಗಳು ಸಚಿನ್‌ಗೆ ಸೇರಿದ ತಮಿಳುನಾಡಿನ ನಿವಾಸದ ಮೇಲೂ ದಾಳಿ ನಡೆಸಿ ಶೋಧ ನಡೆಸಿದ್ದಾರೆ. ಈ ವೇಳೆ ಹೆಚ್ಚುವರಿಯಾಗಿ ರೂ 1.3 ಕೋಟಿ ನಗದು ಪತ್ತೆಯಾಗಿದೆ. ಕಾರು ಮತ್ತು ಮನೆಯಿಂದ ಒಟ್ಟು ರೂ 10.3 ಕೋಟಿಗೂ ಅಧಿಕ ನಗದನ್ನು ಜಪ್ತಿ ಮಾಡಲಾಗಿದೆ.

# ಕ್ಯೂಆರ್ ದೂರು: ಎಂಎಫ್‌ಸಿ ರೆಸ್ಟೋರೆಂಟ್ ಮೇಲೆ ದಾಳಿ

● ವಿಕ್ರಮ ವಾಹಿನಿ | ಮಂಗಳೂರು

ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ವತಿಯಿಂದ ಸಾರ್ವಜನಿಕರ ದೂರುಗಳನ್ನು ತ್ವರಿತವಾಗಿ ಸ್ವೀಕರಿಸಿ, ಪರಿಶೀಲಿಸಲು ಹೊಸದಾಗಿ ಪರಿಚಯಿಸಲಾಗಿರುವ ಕ್ಯೂಆರ್ ಕೋಡ್ ವ್ಯವಸ್ಥೆಯ ಮೂಲಕ ಬಂದಿರುವ ದೂರಿನ ಆಧಾರದ ಮೇಲೆ ಪರಿಶೀಲನಾ ಕಾರ್ಯಾಚರಣೆ ನಡೆಸಲಾಯಿತು.

ಈ ಹಿನ್ನೆಲೆಯಲ್ಲಿ ಮಂಗಳೂರಿನ ಫಳ್ನೀರ್ ರಸ್ತೆಯಲ್ಲಿರುವ ಎಂಎಫ್‌ಸಿ ರೆಸ್ಟೋರೆಂಟ್ ವಿರುದ್ಧ ಕ್ಯೂಆರ್ ಕೋಡ್ ಮೂಲಕ ಬಂದಿರುವ ದೂರಿನ ಮೇರೆಗೆ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಧಿಕಾರಿಗಳು ದಾಳಿ ನಡೆಸಿ, ರೆಸ್ಟೋರೆಂಟ್‌ನ ಆಹಾರ ತಯಾರಿಕಾ ಸ್ಥಳ, ಆಹಾರ ಪದಾರ್ಥಗಳ ಗುಣಮಟ್ಟ, ಸ್ವಚ್ಛತೆ ಹಾಗೂ



ಆಹಾರ ಸುರಕ್ಷತಾ ನಿಯಮಗಳ ಪಾಲನೆಯ ಕುರಿತು ಪರಿಶೀಲನೆ ನಡೆಸಿದರು.

ಪರಿಶೀಲನೆಯ ಸಂದರ್ಭದಲ್ಲಿ ಆಹಾರ ಸುರಕ್ಷತೆ ಹಾಗೂ ನೈರ್ಮಲ್ಯಕ್ಕೆ ಸಂಬಂಧಿಸಿದ ಅಂಶಗಳನ್ನು ಅಧಿಕಾರಿಗಳು ಪರಿಶೀಲಿಸಿ, ಅಗತ್ಯವಿರುವ ಮಾದರಿಗಳನ್ನು ಸಂಗ್ರಹಿಸಿ ಮುಂದಿನ ಕಾನೂನು ಕ್ರಮಕ್ಕಾಗಿ ಕಳುಹಿಸುವ ಪ್ರಕ್ರಿಯೆ ಕೈಗೊಳ್ಳಲಾಯಿತು.

ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆಹಾರ ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸುವ ಹೋಟೆಲ್, ರೆಸ್ಟೋರೆಂಟ್ ಹಾಗೂ ಇತರೆ ಆಹಾರ ಸಂಸ್ಥೆಗಳ ವಿರುದ್ಧ ಕಾನೂನುಬದ್ಧವಾಗಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ತಿಳಿಸಿದೆ.

ಸಾರ್ವಜನಿಕರು ಆಹಾರದ ಗುಣಮಟ್ಟ, ಸ್ವಚ್ಛತೆ ಅಥವಾ ಆಹಾರ ಸುರಕ್ಷತೆಗೆ ಸಂಬಂಧಿಸಿದ ಯಾವುದೇ ದೂರುಗಳಿದ್ದಲ್ಲಿ ಇಲಾಖೆಯ ಕ್ಯೂಆರ್ ಕೋಡ್ ವ್ಯವಸ್ಥೆಯ ಮೂಲಕ ದೂರು ಸಲ್ಲಿಸುವಂತೆ ಮನವಿ ಮಾಡಲಾಗಿದೆ.

# ಪೊಲೀಸ್ ಠಾಣೆಗಳಲ್ಲಿ ಸಿಸಿಟಿವಿ ಲೈವ್ ಟ್ರ್ಯಾಕ್ ಕಡ್ಡಾಯ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದ ಎಲ್ಲ ಪೊಲೀಸ್ ಠಾಣೆಗಳಲ್ಲಿ ಅಳವಡಿಸಿರುವ ಸಿಸಿಟಿವಿ ಕ್ಯಾಮರಾಗಳು ಯಾವುದೇ ಅಡಚಣೆಯಿಲ್ಲದೆ 24x7 ಕಾರ್ಯನಿರ್ವಹಿಸುವಂತೆ ನೋಡಿಕೊಳ್ಳಬೇಕು ಹಾಗೂ ಅವುಗಳ ಕಾರ್ಯನಿರ್ವಹಣೆಯನ್ನು ಕಡ್ಡಾಯವಾಗಿ ಲೈವ್ ಟ್ರ್ಯಾಕ್ ಮಾಡಬೇಕು ಎಂದು ಕರ್ನಾಟಕ ಹೈಕೋರ್ಟ್ ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಿದೆ.

ರಾಮಮೂರ್ತಿನಗರದ ವಿ. ಶೈಲಜಾ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರ ಏಕಸದಸ್ಯ ಪೀಠ ಈ ನಿರ್ದೇಶನ ನೀಡಿದೆ. ವೈಟ್‌ಫೀಲ್ಡ್ ಪೊಲೀಸ್ ಠಾಣೆಯಲ್ಲಿ ತಮಗೆ ಪೊಲೀಸರು ಕಿರುಕುಳ ನೀಡಿದ ಆರೋಪಕ್ಕೆ ಸಂಬಂಧಿಸಿದಂತೆ ಸಿಸಿಟಿವಿ ದೃಶ್ಯಾವಳಿ ನೀಡುವಂತೆ ಶೈಲಜಾ ಕೋರಿದ್ದರು. ಪೊಲೀಸರು ಮನವಿ ತಿರಸ್ಕರಿಸಿದ ಬಳಿಕ ಅವರು ಕರ್ನಾಟಕ ಮಾಹಿತಿ ಆಯೋಗದ ಮೊರೆ ಹೋಗಿದ್ದರು. ಅಲ್ಲಿಯೂ ಮನವಿ ತಿರಸ್ಕೃತವಾದ ಹಿನ್ನೆಲೆಯಲ್ಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ರಾಜ್ಯದ ವಿವಿಧ ಪೊಲೀಸ್ ಠಾಣೆಗಳ ಸಿಸಿಟಿವಿ ಮತ್ತು ಯುಪಿಎಸ್ ವ್ಯವಸ್ಥೆಗಳ ವರದಿಯನ್ನು ಪರಿಶೀಲಿಸಿದ ನ್ಯಾಯಾಲಯ, ಹಲವು ಠಾಣೆಗಳಲ್ಲಿ ಸಿಸಿಟಿವಿಗಳಿಗೆ ಸಮರ್ಪಕ ವಿದ್ಯುತ್ ಬ್ಯಾಕಪ್ ಇಲ್ಲದಿರುವುದನ್ನು ಗಮನಿಸಿದೆ.

ವಿದ್ಯುತ್ ವ್ಯತ್ಯಯವಾದಾಗ ಕ್ಯಾಮರಾಗಳು ಸ್ಥಗಿತಗೊಂಡರೆ, ಸಿಸಿಟಿವಿ ಅಳವಡಿಕೆಯ ಮೂಲ ಉದ್ದೇಶವೇ ವಿಫಲವಾಗಲಿದೆ ಎಂದು ಪೀಠ ಹೇಳಿದೆ.

ಪೊಲೀಸ್ ಠಾಣೆಗಳ ಚಟುವಟಿಕೆಗಳ ಮೇಲ್ವಿಚಾರಣೆಗಾಗಿ ಸಿಸಿಟಿವಿ ಅಳವಡಿಸುವಂತೆ ಸುಪ್ರೀಂ ಕೋರ್ಟ್ ನೀಡಿರುವ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ನ್ಯಾಯಾಲಯ ಸೂಚಿಸಿದೆ. ಈ ನಿಟ್ಟಿನಲ್ಲಿ ಗೃಹ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ ಹಾಗೂ ಪೊಲೀಸ್ ಮಹಾನಿರ್ದೇಶಕರು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶಿಸಿದೆ.

ಎಲ್ಲ ಪೊಲೀಸ್ ಠಾಣೆಗಳು ಹಾಗೂ ಪೊಲೀಸ್ ಸಂಸ್ಥೆಗಳಿಗೆ ಅನ್ವಯವಾಗುವಂತೆ ಮಧ್ಯಂತರ ಮಾರ್ಗಸೂಚಿಗಳನ್ನೂ ಹೈಕೋರ್ಟ್ ಹೊರಡಿಸಿದೆ.

ವೈಟ್‌ಫೀಲ್ಡ್ ಠಾಣೆಯಲ್ಲಿ ಸುಮಾರು 11 ತಿಂಗಳ ಕಾಲ ಯುಪಿಎಸ್ ಕಾರ್ಯನಿರ್ವಹಿಸದಿರುವುದನ್ನೂ ನ್ಯಾಯಾಲಯ ಗಂಭೀರವಾಗಿ ಪರಿಗಣಿಸಿದ್ದು, ಇಂತಹ ಲೋಪಗಳಿಗೆ ಕಡಿವಾಣ ಹಾಕುವ ಮೂಲಕ ಪೊಲೀಸ್ ಠಾಣೆಗಳಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆ ಹೆಚ್ಚಿಸುವ ಅಗತ್ಯವನ್ನು ಒತ್ತಿಹೇಳಿದೆ.

# ಮಂಗಳೂರು ರೈಲ್ವೆ ಜಾಲ

## ಮೈಸೂರು ವಿಭಾಗಕ್ಕೆ ಸೇರ್ಪಡೆ

● ವಿಕ್ರಮ ವಾಹಿನಿ | ಮಂಗಳೂರು

ಕರಾವಳಿ ಭಾಗದ ಬಹುದಿನಗಳ ಬೇಡಿಕೆಗೆ ಕೇಂದ್ರ ಸರ್ಕಾರ ಅಸ್ತು ನೀಡಿದ್ದು, ದಕ್ಷಿಣ ರೈಲ್ವೆಯ ಪಾಲಕ್ಕಾಡ್ ವಿಭಾಗದ ವ್ಯಾಪ್ತಿಯಲ್ಲಿದ್ದ ಮಂಗಳೂರು ರೈಲ್ವೆ ಜಾಲವನ್ನು ನೈರುತ್ಯ ರೈಲ್ವೆಯ ಮೈಸೂರು ವಿಭಾಗಕ್ಕೆ ಸೇರ್ಪಡೆಗೊಳಿಸಲು ರೈಲ್ವೆ ಸಚಿವಾಲಯ ಅಧಿಕೃತ ಅನುಮೋದನೆ ನೀಡಿದೆ. ಹೊಸ ವ್ಯವಸ್ಥೆ 2026ರ ಅಕ್ಟೋಬರ್ 1ರಿಂದ ಜಾರಿಗೆ ಬರಲಿದೆ.

ದಕ್ಷಿಣ ಕನ್ನಡ ಸಂಸದ ಬ್ರಿಜೇಶ್ ಚೌಟ ಈ ನಿರ್ಧಾರವನ್ನು ಸ್ವಾಗತಿಸಿದ್ದು, ಮಂಗಳೂರು ಭಾಗದ ರೈಲ್ವೆ ಆಡಳಿತಾತ್ಮಕ ಗೊಂದಲಗಳಿಗೆ ಇದರಿಂದ ತೆರೆ ಬೀಳಲಿದೆ ಎಂದು ತಿಳಿಸಿದ್ದಾರೆ. ಹೊಸ ರೈಲುಗಳ ಆರಂಭ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ವಿವಿಧ ಕಾಮಗಾರಿಗಳ ಅನುಷ್ಠಾನದಲ್ಲಿ ವೇಗ ಹೆಚ್ಚುವ ನಿರೀಕ್ಷೆ ಇದೆ ಎಂದು ಅವರು ಹೇಳಿದ್ದಾರೆ.



ರೈಲ್ವೆ ಮಂಡಳಿ ಹೊರಡಿಸಿರುವ ಆದೇಶದಂತೆ, ಮಂಗಳೂರು ರೈಲ್ವೆ ಪ್ರದೇಶದಿಂದ ಉಳ್ಳಾಲ ರೈಲ್ವೆ ನಿಲ್ದಾಣದ ವರೆಗೆ, ಉಳ್ಳಾಲ ಸೇರಿದಂತೆ, ಇರುವ ರೈಲ್ವೆ ಜಾಲವನ್ನು ಪಾಲಕ್ಕಾಡ್ ವಿಭಾಗದಿಂದ ಮೈಸೂರು ವಿಭಾಗಕ್ಕೆ ವರ್ಗಾಯಿಸಲಾಗುತ್ತದೆ. ಇದರೊಂದಿಗೆ ದಕ್ಷಿಣ ರೈಲ್ವೆ ಮತ್ತು ನೈರುತ್ಯ ರೈಲ್ವೆ ನಡುವಿನ ಇಂಟರ್‌ಚೇಂಜ್ ಪಾಯಿಂಟ್ ಪಡೀಲ್‌ನಿಂದ ಉಳ್ಳಾಲಕ್ಕೆ ಸ್ಥಳಾಂತರಗೊಳ್ಳಲಿದೆ.

ತೋಕೂರು ರೈಲ್ವೆ ನಿಲ್ದಾಣವು ಕೊಂಕಣ ರೈಲ್ವೆ ಕಾರ್ಪೊರೇಷನ್ ಲಿಮಿಟೆಡ್ (ಕೆಆರ್‌ಸಿಎಲ್) ವ್ಯಾಪ್ತಿಯಲ್ಲಿಯೇ ಮುಂದುವರಿಯಲಿದ್ದು, ಕೊಂಕಣ ರೈಲ್ವೆ ಮತ್ತು ನೈರುತ್ಯ ರೈಲ್ವೆ ನಡುವಿನ ಇಂಟರ್‌ಚೇಂಜ್ ಪಾಯಿಂಟ್ ಆಗಿ ಕಾರ್ಯನಿರ್ವಹಿಸಲಿದೆ. ಗೆಜೆಟೆಡ್ ಅಧಿಕಾರಿಗಳ ವರ್ಗಾವಣೆ ನಿಯಮಾನುಸಾರ ನಡೆಯಲಿದ್ದು, ನಾನ್–ಗೆಜೆಟೆಡ್ ಸಿಬ್ಬಂದಿಗೆ ದಕ್ಷಿಣ ರೈಲ್ವೆಯಲ್ಲೇ ಮುಂದುವರಿಯುವುದು ಅಥವಾ ನೈರುತ್ಯ ರೈಲ್ವೆಗೆ ವರ್ಗಾವಣೆಯಾಗುವುದು ಎಂಬ ಆಯ್ಕೆ ನೀಡಲಾಗುತ್ತದೆ.

ಕಳೆದ ಎರಡು ವರ್ಷಗಳಿಂದ ರೈಲ್ವೆ ಸಚಿವಾಲಯ ಹಾಗೂ ಉನ್ನತಾಧಿಕಾರಿಗಳೊಂದಿಗೆ ನಡೆಸಿದ ನಿರಂತರ ಪ್ರಯತ್ನದ ಫಲವಾಗಿ ಈ ಮಹತ್ವದ ನಿರ್ಧಾರ ಹೊರಬಿದ್ದಿದೆ ಎಂದು ಸಂಸದ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಅವರು ಕೃತಜ್ಞತೆ ಸಲ್ಲಿಸಿದ್ದಾರೆ. ಹೊಸ ರೈಲ್ವೆ ವ್ಯಾಪ್ತಿ ಬದಲಾವಣೆಗೆ ಸಂಬಂಧಿಸಿದಂತೆ ಶೀಘ್ರದಲ್ಲೇ ಕೇಂದ್ರ ಗೆಜೆಟ್ ಅಧಿಸೂಚನೆ ಹೊರಬೀಳಲಿದೆ.

ಈ ಬದಲಾವಣೆಯಿಂದ ಮಂಗಳೂರು ಭಾಗದ ರೈಲ್ವೆ ಯೋಜನೆಗಳಿಗೆ ಒಂದೇ ವಿಭಾಗದಡಿ ಆಡಳಿತಾತ್ಮಕ ನಿರ್ವಹಣೆ ದೊರೆಯಲಿದ್ದು, ವಿವಿಧ ಇಲಾಖೆಗಳ ನಡುವಿನ ಸಮನ್ವಯ ಸುಧಾರಿಸುವ ನಿರೀಕ್ಷೆಯಿದೆ. ಪ್ರಯಾಣಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವುದರ ಜತೆಗೆ, ಹೊಸ ರೈಲು ಸೇವೆಗಳು, ನಿಲ್ದಾಣಗಳ ಅಭಿವೃದ್ಧಿ ಹಾಗೂ ಮೂಲಸೌಕರ್ಯ ವಿಸ್ತರಣೆಗೆ ಅನುಕೂಲವಾಗಲಿದೆ ಎಂದು ನಿರೀಕ್ಷಿಸಲಾಗಿದೆ.

ಮಂಗಳೂರು ಹಾಗೂ ಕರಾವಳಿ ಭಾಗದ ರೈಲ್ವೆ ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಈ ಕ್ರಮ ಮಹತ್ವದ್ದಾಗಿದೆ. ಬಹುದಿನಗಳಿಂದ ಕೇಳಿಬರುತ್ತಿದ್ದ ಬೇಡಿಕೆ ಈಡೇರಿರುವುದರಿಂದ ಮುಂದಿನ ದಿನಗಳಲ್ಲಿ ರೈಲ್ವೆ ಸೇವೆ ಮತ್ತು ಅಭಿವೃದ್ಧಿ ಕಾಮಗಾರಿಗಳಲ್ಲಿ ವೇಗ ಹೆಚ್ಚುವ ವಿಶ್ವಾಸವನ್ನು ಕರಾವಳಿ ಭಾಗದ ಜನರು ವ್ಯಕ್ತಪಡಿಸಿದ್ದಾರೆ.


ಮಂಗಳೂರು–ಮೈಸೂರು ರೈಲ್ವೆ ಸಂಪರ್ಕದ ಸಮನ್ವಯ ಮತ್ತಷ್ಟು ಸುಧಾರಿಸುವುದರಿಂದ ಕರಾವಳಿ ಭಾಗದ ಪ್ರಯಾಣಿಕರು ಹಾಗೂ ವ್ಯಾಪಾರ ವಲಯಕ್ಕೂ ಅನುಕೂಲವಾಗುವ ನಿರೀಕ್ಷೆಯಿದೆ. ಹೊಸ ಯೋಜನೆಗಳು ಮತ್ತು ಸೇವೆಗಳ ಅನುಷ್ಠಾನದಲ್ಲಿ ಸ್ಥಳೀಯ ಅಗತ್ಯಗಳಿಗೆ ಹೆಚ್ಚಿನ ಆದ್ಯತೆ ದೊರೆಯುವ ಸಾಧ್ಯತೆಯಿದೆ.

# ವರ್ಕ್ ಫ್ರಮ್ ಹೋಮ್‌ಗೆ ಐಟಿ ಕಂಪನಿಗಳ ವಿರೋಧ

● ವಿಕ್ರಮ ವಾಹಿನಿ | ಬೆಂಗಳೂರು

ಔಟರ್ ರಿಂಗ್ ರಸ್ತೆಯಲ್ಲಿ ಉದ್ದೇಶಿತ ವೈಟ್‌ಟಾಪಿಂಗ್ ಕಾಮಗಾರಿಯ ಹಿನ್ನೆಲೆಯಲ್ಲಿ ಐಟಿ ಉದ್ಯೋಗಿಗಳಲ್ಲಿ ಶೇ.50ರಷ್ಟು ಮಂದಿಗೆ ವರ್ಕ್ ಫ್ರಮ್ ಹೋಮ್ ಅವಕಾಶ ನೀಡುವಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮಾಡಿದ್ದ ಮನವಿಗೆ ಐಟಿ ಕಂಪನಿಗಳ ಒಕ್ಕೂಟ ಒಪ್ಪಿಗೆ ನೀಡಿಲ್ಲ.

ಅಕ್ಟೋಬರ್‌ನಿಂದ ಸುಮಾರು 20 ಕಿ.ಮೀ. ರಸ್ತೆಯಲ್ಲಿ ವೈಟ್‌ಟಾಪಿಂಗ್ ಕಾಮಗಾರಿ ಕೈಗೊಳ್ಳಲು ಜಿಬಿಎ ಉದ್ದೇಶಿಸಿದ್ದು, ಸಂಚಾರ ದಟ್ಟಣೆ ನಿಯಂತ್ರಿಸುವ ಉದ್ದೇಶದಿಂದ



ಅರ್ಧದಷ್ಟು ಉದ್ಯೋಗಿಗಳಿಗೆ ಮನೆಯಿಂದಲೇ ಕೆಲಸ ಮಾಡುವಂತೆ ಮನವಿ ಮಾಡಿತ್ತು. ಆದರೆ, ಕಾಮಗಾರಿ ನಿಗದಿತ ಅವಧಿಯಲ್ಲಿ ಪೂರ್ಣಗೊಳ್ಳುವ ಬಗ್ಗೆ ಅನುಮಾನ ವ್ಯಕ್ತಪಡಿಸಿರುವ ಕಂಪನಿಗಳು ಪ್ರಸ್ತಾವನೆಯನ್ನು ತಿರಸ್ಕರಿಸಿವೆ.

ಜಿಬಿಎ ಕೈಗೊಂಡ ಹಲವು ಕಾಮಗಾರಿಗಳು ನಿಗದಿತ ಸಮಯಕ್ಕೆ ಪೂರ್ಣಗೊಂಡಿಲ್ಲ. ಹೀಗಾಗಿ ವೈಟ್‌ಟಾಪಿಂಗ್ ಕಾಮಗಾರಿ ವಿಳಂಬವಾದರೆ ವರ್ಕ್ ಫ್ರಮ್ ಹೋಮ್ ಅವಧಿಯೂ ಅನಿರ್ದಿಷ್ಟವಾಗಿ ವಿಸ್ತರಣೆಯಾಗುವ ಸಾಧ್ಯತೆ ಇದೆ. ಇದರಿಂದ ಸಂಸ್ಥೆಗಳ ಕಾರ್ಯಕ್ಷಮತೆ ಮತ್ತು ಉತ್ಪಾದಕತೆ ಮೇಲೆ ಪರಿಣಾಮ ಬೀರುವ ಆತಂಕವನ್ನು ಐಟಿ ಕಂಪನಿಗಳು ವ್ಯಕ್ತಪಡಿಸಿವೆ.

ಅಕ್ಟೋಬರ್ ಬದಲಿಗೆ ನವೆಂಬರ್‌ನಿಂದ ಹಂತ ಹಂತವಾಗಿ ಕಾಮಗಾರಿ ಆರಂಭಿಸುವಂತೆ ಐಟಿ ಕಂಪನಿಗಳ ಒಕ್ಕೂಟ ಸಲಹೆ ನೀಡಿದೆ. ಅಲ್ಲದೆ, ಮುಖ್ಯ ರಸ್ತೆಯಲ್ಲಿ ಕಾಮಗಾರಿ ಕೈಗೊಳ್ಳುವ ಮೊದಲು ಸರ್ವೀಸ್ ರಸ್ತೆಗಳನ್ನು ದುರಸ್ತಿಪಡಿಸಿ ಸಂಚಾರಕ್ಕೆ ಮುಕ್ತಗೊಳಿಸಬೇಕು ಎಂದು ಸೂಚಿಸಿದೆ.

ಈ ಕ್ರಮಗಳಿಂದ ಸಂಚಾರದ ಮೇಲಿನ ಒತ್ತಡ ಕಡಿಮೆ ಮಾಡುವುದರ ಜತೆಗೆ, ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸಾಧ್ಯವಾಗಲಿದೆ ಎಂಬ ಅಭಿಪ್ರಾಯವನ್ನು ಒಕ್ಕೂಟ ವ್ಯಕ್ತಪಡಿಸಿದೆ. ಜಿಬಿಎ ಮತ್ತು ಐಟಿ ಸಂಸ್ಥೆಗಳ ನಡುವೆ ಈ ಕುರಿತು ಮತ್ತಷ್ಟು ಚರ್ಚೆ ನಡೆಯುವ ಸಾಧ್ಯತೆ ಇದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ಸರ್ಕಾರದ ಆದಾಯ ಹೆಚ್ಚಳಕ್ಕೆ ಸಲಹೆ ನೀಡಿ: ಸಿಎಂ ಶಿವಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರದ ಹಣಕಾಸು ವ್ಯವಸ್ಥೆ ಸುಧಾರಣೆ, ಆದಾಯ ಸಂಗ್ರಹ ಹೆಚ್ಚಳ ಹಾಗೂ ಸಂಪನ್ಮೂಲಗಳ ಸೋರಿಕೆ ತಡೆಗೆ ಸಲಹೆ-ಮಾರ್ಗದರ್ಶನ ನೀಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಚಾರ್ಟರ್ಡ್ ಅಕೌಂಟೆಂಟ್‌ಗಳಿಗೆ ಮನವಿ ಮಾಡಿದರು.

ಅರಮನೆ ಮೈದಾನದಲ್ಲಿ ದಿ ಇನ್‌ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ (ಐಸಿಎಐ) ಆಯೋಜಿಸಿದ್ದ 'ಸಂವಾದ ಸಮ್ಮೇಳನ'ದಲ್ಲಿ ಮಾತನಾಡಿದ ಅವರು, 'ನಮ್ಮ ಸರ್ಕಾರ ತೆರೆದ ಪುಸ್ತಕ. ಸರ್ಕಾರದ ತಪ್ಪುಗಳು ಮತ್ತು ಸಂಪನ್ಮೂಲ ಸೋರಿಕೆಯನ್ನು ಸರಿಪಡಿಸಲು ನಿಮ್ಮ ಸಲಹೆ ಅಗತ್ಯ. ಆದಾಯ ಹೆಚ್ಚಿಸುವುದರ ಜತೆಗೆ ವ್ಯಾಪಾರ-ಉದ್ಯಮಗಳಿಗೆ ತೊಂದರೆಯಾಗದಂತೆ ಮಾರ್ಗದರ್ಶನ ನೀಡಿ' ಎಂದರು.

ಪ್ರಾಮಾಣಿಕ ತೆರಿಗೆ ಪಾವತಿದಾರರಿಗೆ ಅಧಿಕಾರಿಗಳಿಂದ ಕಿರುಕುಳವಾಗಬಾರದು. ತೆರಿಗೆ ವ್ಯವಸ್ಥೆ ಸರಳವಾಗಬೇಕು. ಕರ್ನಾಟಕದಲ್ಲಿ ಹೆಚ್ಚಿನ ಪ್ರಮಾಣದ ವ್ಯವಹಾರಗಳು ಪಾರದರ್ಶಕವಾಗಿ ನಡೆಯುತ್ತಿದ್ದು, ರಾಜ್ಯ ಆರ್ಥಿಕವಾಗಿ ಬಲಿಷ್ಠವಾಗಲು ವೃತ್ತಿಪರರ ಮಾರ್ಗದರ್ಶನ ಅಗತ್ಯ ಎಂದು ಹೇಳಿದರು.

ಕರ್ನಾಟಕ ದೇಶದ ಆರ್ಥಿಕ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ದೇಶದ ಸಾಫ್ಟ್‌ವೇರ್ ರಫ್ತಿನಲ್ಲಿ ರಾಜ್ಯದ ಕೊಡುಗೆ ಶೇ.42ರಷ್ಟಿದ್ದು, ಜಾಗತಿಕ ಮಟ್ಟದ ಹಲವು ಕಂಪನಿಗಳು ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿವೆ. ಹೂಡಿಕೆ, ಉದ್ಯೋಗ ಸೃಷ್ಟಿ, ತಂತ್ರಜ್ಞಾನ ಮತ್ತು ರಫ್ತಿಗೆ ಕರ್ನಾಟಕ ಅತ್ಯುತ್ತಮ ಕೇಂದ್ರವಾಗಿದೆ ಎಂದರು.

'ನಂಬಿಕೆ ನಿಮ್ಮ ರಕ್ತದಲ್ಲಿದೆ, ಅದನ್ನು ಉಳಿಸಿಕೊಳ್ಳಿ. ನೀವು ಜನರ ಆಸ್ತಿ ಮತ್ತು ಆದಾಯಕ್ಕೆ ಮಾರ್ಗದರ್ಶನ ನೀಡುವ ಜವಾಬ್ದಾರಿ ಹೊಂದಿದ್ದೀರಿ' ಎಂದು ಸಿಎಗಳಿಗೆ ಕರೆ ನೀಡಿದ ಸಿಎಂ, ಸಿಎಸ್‌ಆರ್ ನಿಧಿಯನ್ನು ಗ್ರಾಮೀಣ ಭಾಗದ ಪ್ರಾಥಮಿಕ ಶಿಕ್ಷಣಕ್ಕೆ ಪರಿಣಾಮಕಾರಿಯಾಗಿ ಬಳಸುವಂತೆ ಉದ್ಯಮಿಗಳಿಗೆ ಮಾರ್ಗದರ್ಶನ ನೀಡಬೇಕು ಎಂದರು.

ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ವಾರ್ಷಿಕ 52 ಸಾವಿರ ಕೋಟಿ ಹಾಗೂ ರೈತರ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಸೇರಿದಂತೆ ಹಲವು ಸಾಮಾಜಿಕ ಭದ್ರತಾ ಯೋಜನೆಗಳಿಗೆ ದೊಡ್ಡ ಮೊತ್ತದ ಹಣ ವ್ಯಯಿಸುತ್ತಿದೆ. ಇಂತಹ ಯೋಜನೆಗಳನ್ನು ಮುಂದುವರಿಸಿಕೊಂಡು ಹೋಗಲು ಆದಾಯ ಹೆಚ್ಚಿಸುವ ಮಾರ್ಗಗಳನ್ನು ಸೂಚಿಸುವಂತೆ ಅವರು ಮನವಿ ಮಾಡಿದರು.

ಐಸಿಎಐಗೆ ಜಾಗದ ಅಗತ್ಯತೆ ಕುರಿತು ಪ್ರಸ್ತಾಪವಾಗಿರುವ ಹಿನ್ನೆಲೆಯಲ್ಲಿ, ಅಧಿವೇಶನ ಮುಗಿದ ಬಳಿಕ ತಮ್ಮನ್ನು ಭೇಟಿಯಾಗುವಂತೆ ಸಿಎಂ ತಿಳಿಸಿದರು. 'ನಿಮ್ಮ ಜಾಗದ ವಿಚಾರವನ್ನು ಬಗೆಹರಿಸುತ್ತೇನೆ' ಎಂದು ಭರವಸೆ ನೀಡಿದರು.

ಬೆಂಗಳೂರಿನ ಜನಸಂಖ್ಯೆ ಮತ್ತು ವಾಹನಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಂಚಾರ ದಟ್ಟಣೆ ನಿವಾರಣೆಗೆ ಸುರಂಗ ರಸ್ತೆ ಸೇರಿದಂತೆ ಹಲವು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ನಗರಾಭಿವೃದ್ಧಿ ವಿಚಾರದಲ್ಲಿ ರಾಜಕೀಯಕ್ಕಿಂತ ಸಾರ್ವಜನಿಕ ಹಿತಾಸಕ್ತಿಗೆ ಆದ್ಯತೆ ನೀಡಬೇಕು ಎಂದು ಅವರು ಹೇಳಿದರು.

'ದುಡ್ಡು ಮತ್ತು ರಕ್ತ ಎರಡೂ ಹರಿಯುತ್ತಿರಬೇಕು. ರಕ್ತ ಒಂದೇ ಕಡೆ ನಿಂತರೆ ಆರೋಗ್ಯ ಹದಗೆಡುತ್ತದೆ; ಹಣ ಒಂದೇ ಕಡೆ ನಿಂತರೂ ಆರ್ಥಿಕತೆ ಹದಗೆಡುತ್ತದೆ' ಎಂದು ಸಿಎಂ ಶಿವಕುಮಾರ್ ಹೇಳಿದರು.



ಬೆಂಗಳೂರಿನ ಅರಮನೆ ಮೈದಾನದಲ್ಲಿ ದಿ ಇನ್ಸಿಟ್ಯೂಟ್ ಆಫ್ ಚಾರ್ಟೆಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ ಶುಕ್ರವಾರ ಆಯೋಜಿಸಿದ್ದ "ಸಂವಾದ ಸಮ್ಮೇಳನ" ಕಾರ್ಯಕ್ರಮದಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿದರು. ಸಚಿವರಾದ ಪ್ರಿಯಾಂಕ್ ಖರ್ಗೆ, ಸಿಎಂ ರಾಜಕೀಯ ಕಾರ್ಯದರ್ಶಿ ಪೊನ್ನಣ್ಣ, ಭಾರತೀಯ ಚಾರ್ಟರ್ ಅಕೌಂಟೆಂಟ್ಸ್ ಅಸೋಸಿಯೇಷನ್ (ಖಅಂಖ) ಬೆಂಗಳೂರು ವಿಭಾಗದ ಅಧ್ಯಕ್ಷೆ ಕವಿತಾ ಪರಮೇಶ್ ಮತ್ತಿತರರು ಉಪಸ್ಥಿತರಿದ್ದರು.

## ಸೊಸೈಟಿ ಅವ್ಯವಹಾರ: ರೂ 18.32 ಕೋಟಿ ಆಸ್ತಿ ಮುಟ್ಟುಗೋಲು

● ವಿಕ್ರಮ ವಾಹಿನಿ । ಬೆಂಗಳೂರು

ಸಿರಿ ವೈಭವ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತ ಸೊಸೈಟಿ ಅವ್ಯವಹಾರ ಪ್ರಕರಣದ ತನಿಖೆ ಮುಂದುವರಿಸಿರುವ ಜಾರಿ ನಿರ್ದೇಶನಾಲಯ (ಇಡಿ), ಮತ್ತೆ ರೂ 18.32 ಕೋಟಿ ಮೌಲ್ಯದ ಜಮೀನು, ನಿವೇಶನ ಹಾಗೂ ಕಟ್ಟಡಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿದೆ.

ಸೊಸೈಟಿ ಅಧ್ಯಕ್ಷೆ ಬಿ.ಎಸ್. ನಾಗವಲ್ಲಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಜೇಶ್ ಸೇರಿದಂತೆ ಇತರರಿಗೆ ಸೇರಿದ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಸೊಸೈಟಿಯ ಹಣವನ್ನು ದುರುಪಯೋಗಪಡಿಸಿಕೊಂಡು ಬೆಂಗಳೂರು, ರಾಮನಗರ ಹಾಗೂ ಮೈಸೂರಿನಲ್ಲಿ ಆಸ್ತಿ ಖರೀದಿಸಲಾಗಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ತನಿಖೆ ನಡೆಯುತ್ತಿದೆ.



ಈ ಪ್ರಕರಣದಲ್ಲಿ ಇಡಿ ಈ ಹಿಂದೆ ಫೆಬ್ರವರಿಯಲ್ಲಿ ರೂ 16.95 ಕೋಟಿ ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡಿತ್ತು. ಬಳಿಕ ಮಾರ್ಚ್‌ನಲ್ಲಿ ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸುವ ಪ್ರಕ್ರಿಯೆ ಕೈಗೊಂಡಿತ್ತು. ತನಿಖೆ ಮುಂದುವರಿದಂತೆ ಅಕ್ರಮವಾಗಿ ಸಂಪಾದಿಸಿದ ಮತ್ತಷ್ಟು ಆಸ್ತಿಗಳ ಮಾಹಿತಿ ಪತ್ತೆಯಾಗಿದ್ದು, ಇದೀಗ ಹೆಚ್ಚುವರಿಯಾಗಿ ರೂ 18.32 ಕೋಟಿ ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.

ಸೊಸೈಟಿ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಸುಬ್ರಹ್ಮಣ್ಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಕರ್ನಾಟಕ ರಾಜ್ಯ ಫೆಡರಲ್ ಸಹಕಾರಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ನೀಡಿದ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಲಾಗಿತ್ತು.

ಅಧಿಕಾರ ದುರುಪಯೋಗಪಡಿಸಿಕೊಂಡು ಸೊಸೈಟಿಯ ಹಣವನ್ನು ಅಕ್ರಮವಾಗಿ ಬಳಸಿಕೊಂಡಿರುವ ಆರೋಪಗಳ ಕುರಿತು ಇಡಿ ತನಿಖೆ ಮುಂದುವರಿಸಿದ್ದು, ಪ್ರಕರಣದಲ್ಲಿ ಇನ್ನಷ್ಟು ಆಸ್ತಿಗಳು ಹಾಗೂ ಹಣಕಾಸು ವ್ಯವಹಾರಗಳ ಮಾಹಿತಿ ಪತ್ತೆಯಾಗುವ ಸಾಧ್ಯತೆ ಇದೆ.

## 'ನಾಗೇಂದ್ರ ಅಪರಾಧಿ' ಹೇಳಿಕೆ: ಸಚಿವ ಶಿವಲಿಂಗೇಗೌಡಗೆ ಪೇಚು

1ನೇ ಪುಟದಿಂದ

ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ನಾಗೇಂದ್ರ ವಿರುದ್ಧ ಆರೋಪಗಳು ಕೇಳಿಬಂದ ಹಿನ್ನೆಲೆಯಲ್ಲಿ ಸದನದಲ್ಲಿ ಚರ್ಚೆಯಾಗಿತ್ತು. ಆಗ ಪ್ರಕರಣದ ಸತ್ಯಾಸತ್ಯತೆ ಸ್ಪಷ್ಟವಾಗಿರಲಿಲ್ಲ ಎಂದು ಹೇಳಿದರು. 'ಸತ್ಯಾಸತ್ಯತೆ ತಿಳಿಯದೇ ರಾಜೀನಾಮೆ ಕೊಡಿಸಿ ನಾಗೇಂದ್ರ ಅವರನ್ನು ಬಲಿಪಶು ಮಾಡಲಾಯಿತೇ?' ಎಂಬ ಪ್ರಶ್ನೆಗೆ, 'ನಾಗೇಂದ್ರ ಮೇಲ್ನೋಟಕ್ಕೆ ಅಪರಾಧಿ ಎಂಬ ಶಂಕೆ ಇದ್ದಿದ್ದರಿಂದ ರಾಜೀನಾಮೆ ಪಡೆಯಲಾಗಿತ್ತು' ಎಂದು ಉತ್ತರಿಸಿದರು.

ಸಚಿವರ ಈ ಹೇಳಿಕೆ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದಂತೆ ವಿವಾದಕ್ಕೆ ಕಾರಣವಾಯಿತು. ಪಕ್ಕದಲ್ಲಿದ್ದ ಶಾಸಕರು ಹೇಳಿಕೆಯನ್ನು ಸರಿಪಡಿಸಿಕೊಳ್ಳುವಂತೆ ಸೂಚಿಸಿದ ಬಳಿಕ ಶಿವಲಿಂಗೇಗೌಡ, 'ನಾಗೇಂದ್ರ ಆರೋಪಿ ಇರಬಹುದೆಂಬ ಶಂಕೆಯಿಂದ ರಾಜೀನಾಮೆ ಪಡೆಯಲಾಗಿತ್ತು' ಎಂದು ಸ್ಪಷ್ಟಪಡಿಸಿದರು.

ನಾಗೇಂದ್ರ ಅವರನ್ನು ಸಂಪುಟದಿಂದ ವಜಾಗೊಳಿಸುವಂತೆ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವ ಸಂದರ್ಭದಲ್ಲೇ ಸಚಿವರ ಈ ಹೇಳಿಕೆ ಆಡಳಿತಾರೂಢ ಕಾಂಗ್ರೆಸ್‌ಗೆ ಮುಜುಗರ ಉಂಟುಮಾಡಿದೆ.

## 2 ಹಡಗು ಅಪಹರಣ; 22 ಭಾರತೀಯರು ಸುರಕ್ಷಿತ

● ವಿಕ್ರಮ ವಾಹಿನಿ । ನವದೆಹಲಿ

ಯೆಮೆನ್ ಮತ್ತು ಸೊಮಾಲಿಯಾ ಕರಾವಳಿಯ ಸಮೀಪ ನಡೆದ ಎರಡು ಪ್ರತ್ಯೇಕ ಘಟನೆಗಳಲ್ಲಿ ಕಡಲ್ಗಳ್ಳರು ಎರಡು ವಾಣಿಜ್ಯ ಹಡಗುಗಳನ್ನು ಅಪಹರಿಸಿರುವುದು ಆತಂಕಕ್ಕೆ ಕಾರಣವಾಗಿದೆ. ಎರಡೂ ಹಡಗುಗಳಲ್ಲಿ 22 ಭಾರತೀಯ ನಾವಿಕರು ಸೇರಿದಂತೆ ಒಟ್ಟು 30 ಸಿಬ್ಬಂದಿ ಇದ್ದರು. ಭಾರತೀಯ ನಾವಿಕರೆಲ್ಲರೂ ಸುರಕ್ಷಿತವಾಗಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಘಟನೆಗಳನ್ನು ದೃಢಪಡಿಸಿದ್ದು, ಅಪಹರಣಕ್ಕೊಳಗಾದ ಎರಡೂ ಹಡಗುಗಳು ವಿದೇಶಿ ಧ್ವಜ ಹೊಂದಿವೆ ಎಂದು ತಿಳಿಸಿದ್ದಾರೆ. ಘಟನೆಗಳ ಕುರಿತು ಲಭ್ಯವಾಗಿರುವ ಮಾಹಿತಿಯನ್ನು ಆಧರಿಸಿ ಭಾರತ ಸರ್ಕಾರ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದು, ಭಾರತೀಯ ನಾವಿಕರ ಸುರಕ್ಷತೆ ಖಚಿತಪಡಿಸಿಕೊಳ್ಳಲು ಸಂಬಂಧಿತ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂದು ಅವರು ಹೇಳಿದ್ದಾರೆ.

ಅಧಿಕೃತ ಮಾಹಿತಿಯ ಪ್ರಕಾರ, ಮೊದಲ ಹಡಗು 'ಎಂಟಿ ಸಿಬು 1'ನಲ್ಲಿ 16 ಭಾರತೀಯ ಪ್ರಜೆಗಳು ಇದ್ದರು. ಮತ್ತೊಂದು ಹಡಗು 'ಎಂವಿ ಲುತುಫ್'ನಲ್ಲಿ 6 ಭಾರತೀಯ ನಾವಿಕರು ಇದ್ದರು. ಹೀಗಾಗಿ ಎರಡೂ ಹಡಗುಗಳಲ್ಲಿ ಒಟ್ಟು 22 ಭಾರತೀಯರು ಕರ್ತವ್ಯ ನಿರ್ವಹಿಸುತ್ತಿದ್ದರು.

ಇದುವರೆಗೆ ಭಾರತ ಸರ್ಕಾರಕ್ಕೆ ಲಭ್ಯವಾಗಿರುವ ಮಾಹಿತಿಯಂತೆ, ಅಪಹರಣಕ್ಕೊಳಗಾದ ಎಲ್ಲ ಭಾರತೀಯ ನಾವಿಕರೂ ಸುರಕ್ಷಿತವಾಗಿದ್ದಾರೆ. ಅವರ ಆರೋಗ್ಯ, ಸುರಕ್ಷತೆ ಹಾಗೂ ಪ್ರಸ್ತುತ ಪರಿಸ್ಥಿತಿ ಕುರಿತು ಸಂಬಂಧಿತ ಸಂಸ್ಥೆಗಳೊಂದಿಗೆ ಮಾಹಿತಿ ವಿನಿಮಯ ನಡೆಯುತ್ತಿದೆ.

## ಕಾಮನ್‌ವೆಲ್ತ್ ಪದಕ ವಿಜೇತೆ ಶಿಲ್ಪಾಗೆ ರೂ 20 ಲಕ್ಷ, 'ಗ್ರೂಪ್ ಬಿ' ನೌಕರಿ

● ವಿಕ್ರಮ ವಾಹಿನಿ । ಬೆಂಗಳೂರು

ಗ್ಲಾಸ್ಗೊದಲ್ಲಿ ನಡೆದ 2026ರ ಪ್ಯಾರಾ ಕಾಮನ್‌ವೆಲ್ತ್ ಕ್ರೀಡಾಕೂಟದ ಮಹಿಳೆಯರ ಪ್ಯಾರಾ ಶಾಟ್‌ಪುಟ್ ಎಫ್-57 ವಿಭಾಗದಲ್ಲಿ ಕಂಚಿನ ಪದಕ ಗೆದ್ದ ಕರ್ನಾಟಕದ ಕ್ರೀಡಾಪಟು ಕೆ.ಎಸ್. ಶಿಲ್ಪಾ ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶುಕ್ರವಾರ ವಿಧಾನಸೌಧದಲ್ಲಿ ಸನ್ಮಾನಿಸಿದರು.

ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದ ಕೀರ್ತಿ ಹೆಚ್ಚಿಸಿದ ಶಿಲ್ಪಾ ಅವರಿಗೆ ರಾಜ್ಯ ಸರ್ಕಾರದ ವತಿಯಿಂದ ರೂ 20 ಲಕ್ಷ ಪ್ರೋತ್ಸಾಹಧನದ ಚೆಕ್ ಅನ್ನು ಮುಖ್ಯಮಂತ್ರಿ ಹಸ್ತಾಂತರಿಸಿದರು. ಇದೇ ವೇಳೆ ಶಿಲ್ಪಾ ಅವರಿಗೆ 'ಗ್ರೂಪ್ ಬಿ' ಸರ್ಕಾರಿ ನೌಕರಿ ನೀಡುವುದಾಗಿ ಸರ್ಕಾರ ಘೋಷಿಸಿತು.

ಮೈಸೂರು ಜಿಲ್ಲೆಯ ಕೆ.ಆರ್.ನಗರ ತಾಲೂಕಿನ ಕಂಚುಗಾರ ಕೊಪ್ಪಲು ಮೂಲದ ಶಿಲ್ಪಾ, ನಾಲ್ಕನೇ ವಯಸ್ಸಿನಲ್ಲಿ ಸಂಭವಿಸಿದ ಅಪಘಾತದಲ್ಲಿ ಎಡಗಾಲು ಕಳೆದುಕೊಂಡಿದ್ದರು. ಆದರೆ ಈ ಅನಿರೀಕ್ಷಿತ ಘಟನೆಗೆ ಧೃತಿಗೆಡದೆ ಶಿಕ್ಷಣದ ಜತೆಗೆ ಕ್ರೀಡೆಯಲ್ಲಿ ಆಸಕ್ತಿ ಬೆಳೆಸಿಕೊಂಡು ಶಾಟ್‌ಪುಟ್‌ನಲ್ಲಿ ಸಾಧನೆ ಮಾಡಿದರು.

ಗ್ಲಾಸ್ಗೊದಲ್ಲಿ ನಡೆದ ಪ್ಯಾರಾ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಭಾರತವನ್ನು ಪ್ರತಿನಿಧಿಸಿದ ಅವರು, ಮಹಿಳೆಯರ ಎಫ್-57 ಶಾಟ್‌ಪುಟ್ ವಿಭಾಗದಲ್ಲಿ ಕಂಚಿನ ಪದಕ ಗೆದ್ದು ದೇಶ ಹಾಗೂ ರಾಜ್ಯಕ್ಕೆ ಹೆಮ್ಮೆ ತಂದಿದ್ದಾರೆ.

'ಶಿಲ್ಪಾ ಅವರ ಸಾಧನೆ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕ. ಅವರ ಮುಂದಿನ ಗುರಿಗಳಿಗೂ ಯಶಸ್ಸು ದೊರೆಯಲಿ' ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶುಭ ಹಾರೈಸಿದರು.



ಸ್ಕಾಟ್ ಲ್ಯಾಂಡಿನ ಗ್ಲಾಸ್ಕೋದಲ್ಲಿ ನಡೆದ ಕಾಮನ್ ವೆಲ್ತ್ 2026 ಕ್ರೀಡಾಕೂಟದಲ್ಲಿ ಮಹಿಳೆಯರ ಪ್ಯಾರಾ ಶಾಟ್ ಪುಟ್ ವಿಭಾಗದಲ್ಲಿ ಕಂಚಿನ ಪದಕ ವಿಜೇತರಾದ ಕೆ ಎಸ್ ಶಿಲ್ಪ ಅವರಿಗೆ ಸಿಎಂ ಡಿ ಕೆ ಶಿವಕುಮಾರ್ ಅವರು ವಿಧಾನಸೌಧದ ತಮ್ಮ ಕಚೇರಿಯಲ್ಲಿ ಶುಕ್ರವಾರ ಅಭಿನಂದನೆ ಸಲ್ಲಿಸಿ, ಕೊಡುಗೆಯಾಗಿ 20 ಲಕ್ಷ ರೂ.ಗಳ ಚೆಕ್ ವಿತರಿಸಿದರು. ಈ ಸಂದರ್ಭದಲ್ಲಿ ಡಿಸಿಎಂ ಡಾ ಜಿ ಪರಮೇಶ್ವರ, ಶಾಸಕ ರವಿಶಂಕರ್, ಕರ್ನಾಟಕ ಒಲಿಂಪಿಂಕ್ ಅಸೋಸಿಯೇಷನ್ ಅಧ್ಯಕ್ಷ, ವಿಧಾನ ಪರಿಷತ್ ಸದಸ್ಯ ಗೋವಿಂದರಾಜು ಇನ್ನಿತರರು ಉಪಸ್ಥಿತರಿದ್ದರು.

ಉಪಮುಖ್ಯಮಂತ್ರಿ ಹಾಗೂ ಕ್ರೀಡಾ ಮತ್ತು ಯುವಜನ ಸೇವಾ ಸಚಿವ ಡಾ. ಜಿ. ಪರಮೇಶ್ವರ, ಕರ್ನಾಟಕ ಒಲಿಂಪಿಕ್ ಅಸೋಸಿಯೇಷನ್ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಡಾ. ಕೆ. ಗೋವಿಂದರಾಜ್ ಸೇರಿದಂತೆ ಹಲವು ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಮಗನನ್ನು ರಕ್ಷಿಸಲು ಹೋದ ತಂದೆ ಸಾವು; ಆಘಾತದಲ್ಲಿ ತಾಯಿಯೂ ಬಲಿ

● ವಿಕ್ರಮ ವಾಹಿನಿ । ಛತ್ರಪತಿ ಸಂಭಾಜಿನಗರ (ಮಹಾರಾಷ್ಟ್ರ)

**ಮೊಬೈಲ್‌ಗಾಗಿ ನಡೆದ ಕೌಟುಂಬಿಕ ಜಗಳ ದುರಂತಕ್ಕೆ ತಿರುಗಿ, ಮಗನನ್ನು ರಕ್ಷಿಸಲು ಹೋದ ತಂದೆ ಹಾಗೂ ಆಘಾತದಿಂದ ತಾಯಿಯೂ ಪ್ರಾಣ ಕಳೆದುಕೊಂಡ ಘಟನೆ ಸ್ಥಳೀಯರನ್ನು ಬೆಚ್ಚಿಬೀಳಿಸಿದೆ. ಘಟನೆಯಲ್ಲಿ ಒಂದೇ ಕುಟುಂಬದ ಮೂವರು ಮೃತಪಟ್ಟಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.**

ಹೊಸ ಮೊಬೈಲ್ ಫೋನ್‌ಗಾಗಿ ಪೋಷಕರೊಂದಿಗೆ ನಡೆದ ಜಗಳವೊಂದು ಒಂದೇ ಕುಟುಂಬದ ಮೂವರ ಸಾವಿನಲ್ಲಿ ಅಂತ್ಯಗೊಂಡ ಹೃದಯವಿದ್ರಾವಕ ಘಟನೆ ಮಹಾರಾಷ್ಟ್ರದ ಛತ್ರಪತಿ ಸಂಭಾಜಿನಗರದಲ್ಲಿ ನಡೆದಿದೆ. 19 ವರ್ಷದ ಯುವಕನೊಬ್ಬ ಬೆಟ್ಟದಿಂದ ಜಿಗಿಯುವುದಾಗಿ ಬೆದರಿಸಿದಾಗ ಆತನನ್ನು ರಕ್ಷಿಸಲು ಮುಂದಾದ ತಂದೆ ಪ್ರಪಾತಕ್ಕೆ ಬಿದ್ದು ಮೃತಪಟ್ಟಿದ್ದಾರೆ. ಗಂಡ ಹಾಗೂ ಮಗನ ಸಾವಿನಿಂದ ಆಘಾತಕ್ಕೊಳಗಾದ ತಾಯಿಯೂ ಬೆಟ್ಟದಿಂದ ಹಾರಿ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತರನ್ನು ಝುಲ್ತಾ ಫಾಟಾ ಪ್ರದೇಶದ ನಿವಾಸಿಗಳಾದ ಮುರಳೀಧರ್ ಚಾಂದಗುಡೆ (48), ಅವರ ಪತ್ನಿ ಸಂಗೀತಾ ಹಾಗೂ ಪುತ್ರ ಕುನಾಲ್ (19) ಎಂದು ಗುರುತಿಸಲಾಗಿದೆ. ಹೊಸ ಮೊಬೈಲ್ ಫೋನ್ ಕೊಡಿಸುವಂತೆ ಪೋಷಕರೊಂದಿಗೆ ಜಗಳವಾಡಿದ ಬಳಿಕ ಕುನಾಲ್ ಕೋಪಗೊಂಡು ತಿಸಗಾಂವ್‌ನ ಖವಾಡ್ಯಾ ಬೆಟ್ಟಕ್ಕೆ ತೆರಳಿದ್ದ ಎನ್ನಲಾಗಿದೆ.

ವಿಷಯ ತಿಳಿದ ಪೋಷಕರು ಕೂಡಲೇ ಬೆಟ್ಟಕ್ಕೆ ತೆರಳಿ ಮನೆಗೆ ವಾಪಸ್ ಬರುವಂತೆ ಮಗನ ಮನವೊಲಿಸಲು ಪ್ರಯತ್ನಿಸಿದ್ದಾರೆ. ಸ್ಥಳೀಯರು, ಪ್ರವಾಸಿಗರು ಹಾಗೂ ಪೊಲೀಸರು ಕೂಡ ಯುವಕನನ್ನು ಸುರಕ್ಷಿತವಾಗಿ ಕೆಳಗಿಳಿಸಲು ಸುಮಾರು ಮೂರು ಗಂಟೆಗಳ ಕಾಲ ಪ್ರಯತ್ನ ನಡೆಸಿದ್ದಾರೆ. ಅಗ್ನಿಶಾಮಕ ಸಿಬ್ಬಂದಿಯೂ ರಕ್ಷಣಾ ಕಾರ್ಯಾಚರಣೆಗೆ ಮುಂದಾಗಿದ್ದರು.


ಮಧ್ಯಾಹ್ನದ ವೇಳೆಗೆ ಮುರಳೀಧರ್ ಅವರು ಮಗನನ್ನು ಸಮಾಧಾನಪಡಿಸಲು ಆತನ ಬಳಿಗೆ ತೆರಳಿದ್ದರು. ಈ ವೇಳೆ ಕುನಾಲ್ ಬೆಟ್ಟದ ಅಂಚಿನಿಂದ ಕೆಳಗೆ ಬಿದ್ದಿದ್ದು, ಆತನನ್ನು ರಕ್ಷಿಸಲು ಮುಂದಾದ ತಂದೆಯೂ ನಿಯಂತ್ರಣ ತಪ್ಪಿ ಪ್ರಪಾತಕ್ಕೆ ಬಿದ್ದಿದ್ದಾರೆ. ಇಬ್ಬರೂ ಸ್ಥಳದಲ್ಲೇ ಮೃತಪಟ್ಟಿರುವುದಾಗಿ ತಿಳಿದುಬಂದಿದೆ. ಗಂಡ ಮತ್ತು ಮಗ ಬೆಟ್ಟದಿಂದ ಬಿದ್ದಿರುವುದನ್ನು ಕಣ್ಣಾರೆ ಕಂಡ ಸಂಗೀತಾ ತೀವ್ರ ಆಘಾತಕ್ಕೊಳಗಾಗಿದ್ದು, ಕೆಲವೇ ಕ್ಷಣಗಳಲ್ಲಿ ಅವರೂ ಬೆಟ್ಟದಿಂದ ಕೆಳಗೆ ಹಾರಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

## ನೈಸ್ ಟೋಲ್ ಕಟ್ಟಬೇಡಿ: ಕುಮಾರಸ್ವಾಮಿ

● ವಿಕ್ರಮ ವಾಹಿನಿ । ಬೆಂಗಳೂರು

ನೈಸ್ ರಸ್ತೆಯ ಟೋಲ್ ಸಂಗ್ರಹ ವಿಚಾರವಾಗಿ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಕೇಂದ್ರ ಸಚಿವ ಹಾಗೂ ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ, ಸಾರ್ವಜನಿಕರು ಟೋಲ್ ಪಾವತಿಸಬಾರದು ಎಂದು ಕರೆ ನೀಡಿದ್ದಾರೆ.

"ಕೈಮುಗಿದು ಹೇಳುತ್ತೇನೆ, ಯುವಕರೇ ನೈಸ್ ಟೋಲ್ ಕಟ್ಟಬೇಡಿ. ಎಫ್‌ಐಆರ್ ದಾಖಲಿಸಿದರೂ ಹೆದರಬೇಡಿ," ಎಂದು ಅವರು ಹೇಳಿದ್ದಾರೆ.



ನೈಸ್ ಯೋಜನೆಗೆ ಸಂಬಂಧಿಸಿದ ನ್ಯಾಯಾಲಯದ ಆದೇಶಗಳು ಹಾಗೂ ನಿಯಮಗಳ ಉಲ್ಲಂಘನೆಯ ಆರೋಪಗಳಿದ್ದರೂ ಸರ್ಕಾರ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಕುಮಾರಸ್ವಾಮಿ ಆರೋಪಿಸಿದರು. ನೈಸ್ ಸಂಸ್ಥೆ ಇದುವರೆಗೆ ಸುಮಾರು 2,000 ಕೋಟಿ ಟೋಲ್ ಸಂಗ್ರಹಿಸಿದೆ ಎಂದು ಹೇಳಿದ ಅವರು, ಈ ಕುರಿತು ಸರ್ಕಾರದ ನಿಲುವನ್ನು ಪ್ರಶ್ನಿಸಿದರು.

ಸಾರ್ವಜನಿಕರಿಗೆ ನೈಸ್ ಸಂಸ್ಥೆ ನೋಟಿಸ್ ನೀಡಿರುವ ವಿಚಾರಕ್ಕೂ ಆಕ್ಷೇಪ ವ್ಯಕ್ತಪಡಿಸಿದ ಅವರು, ಮೊದಲು ನ್ಯಾಯಾಲಯದ ಆದೇಶಗಳನ್ನು ಸಾರ್ವಜನಿಕರಿಗೆ ತಿಳಿಸಬೇಕು ಎಂದರು. ಟೋಲ್ ದರವನ್ನು ಬೇಕಾಬಿಟ್ಟಿಯಾಗಿ ಹೆಚ್ಚಿಸಲಾಗುತ್ತಿದೆ ಎಂಬ ಆರೋಪವನ್ನೂ ಅವರು ಮಾಡಿದರು.

"ನ್ಯಾಯಾಲಯದ ಆದೇಶಗಳಿದ್ದರೂ ಟೋಲ್ ಸಂಗ್ರಹ ಮುಂದುವರಿದಿರುವುದೇಕೆ? ಸರ್ಕಾರಕ್ಕೂ ನೈಸ್ ಸಂಸ್ಥೆಗೂ ಏನು ಸಂಬಂಧ?" ಎಂದು ಪ್ರಶ್ನಿಸಿದ ಕುಮಾರಸ್ವಾಮಿ, ಸಾರ್ವಜನಿಕರು ಅನ್ಯಾಯದ ವಿರುದ್ಧ ಧ್ವನಿ ಎತ್ತಬೇಕು ಎಂದು ಕರೆ ನೀಡಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಗುರಿಯಾಗಿಸಿಕೊಂಡು ಟೀಕಿಸಿದ ಅವರು, ಸರ್ಕಾರ ತನ್ನ ಜವಾಬ್ದಾರಿಯನ್ನು ನಿರ್ವಹಿಸಬೇಕು. ನೈಸ್ ಸಂಸ್ಥೆಯ ವಿರುದ್ಧದ ಆರೋಪಗಳ ಕುರಿತು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

## ಸೆಪ್ಟೆಂಬರ್ 7ರೊಳಗೆ ಕರಾವಳಿ-ಮಲೆನಾಡು ಪ್ರವಾಸೋದ್ಯಮ ನೀತಿಯ ಕರಡು ಸಿದ್ಧ: ಕೆ.ಜೆ. ಜಾರ್ಜ್

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕದ ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳಲ್ಲಿರುವ ವೈವಿಧ್ಯಮಯ ಪ್ರವಾಸೋದ್ಯಮ ಸಾಮರ್ಥ್ಯವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ರೂಪಿಸಲಾಗುತ್ತಿರುವ ಕರಾವಳಿ-ಮಲೆನಾಡು ಪ್ರವಾಸೋದ್ಯಮ ನೀತಿಯ ಕರಡು ಸೆಪ್ಟೆಂಬರ್ 7ರೊಳಗೆ ಸಿದ್ಧಪಡಿಸಲಾಗುವುದು ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವರಾದ ಕೆ.ಜೆ. ಜಾರ್ಜ್ ತಿಳಿಸಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಇಂದು ಕರಾವಳಿ ಮತ್ತು ಮಲೆನಾಡು ಭಾಗದ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಿ, ಪ್ರಸ್ತಾವಿತ ನೀತಿಯಲ್ಲಿ ಅಳವಡಿಸಬೇಕಾದ ಪ್ರಮುಖ ಅಂಶಗಳು, ಪ್ರವಾಸೋದ್ಯಮ ಹೂಡಿಕೆಗೆ ಇರುವ ಅವಕಾಶಗಳು ಹಾಗೂ ಪ್ರಸ್ತುತ ಎದುರಾಗುತ್ತಿರುವ ನಿಯಂತ್ರಣಾತ್ಮಕ ಸಮಸ್ಯೆಗಳ ಕುರಿತು ಸಚಿವರು ಸಮಗ್ರವಾಗಿ ಚರ್ಚಿಸಿದರು.

ಕರಾವಳಿ ಮತ್ತು ಮಲೆನಾಡು ಪ್ರದೇಶಗಳು ಕಡಲತೀರ, ಧಾರ್ಮಿಕ ಹಾಗೂ ಸಾಂಸ್ಕೃತಿಕ ತಾಣಗಳು, ಪ್ರಕೃತಿ ಪ್ರವಾಸೋದ್ಯಮ ಸೇರಿದಂತೆ ವೈವಿಧ್ಯಮಯ ಪ್ರವಾಸೋದ್ಯಮ ಸಂಪನ್ಮೂಲಗಳನ್ನು ಹೊಂದಿವೆ. ಈ ಸಾಮರ್ಥ್ಯವನ್ನು ಬಳಸಿಕೊಂಡು ಸ್ಥಳೀಯ ಆರ್ಥಿಕತೆ, ಹೂಡಿಕೆ ಹಾಗೂ ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ರೀತಿಯಲ್ಲಿ ಸಮಗ್ರ ಪ್ರವಾಸೋದ್ಯಮ ಅಭಿವೃದ್ಧಿಗೆ ನೀತಿ ರೂಪಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

**ಹೂಡಿಕೆಗೆ ಸಿಂಗಲ್ ವಿಂಡೋ ವ್ಯವಸ್ಥೆಗೆ ಸಲಹೆ**

ಸಭೆಯಲ್ಲಿ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೂಡಿಕೆ ಮಾಡಲು ಮುಂದಾಗುವವರಿಗೆ ವಿವಿಧ ಇಲಾಖೆಗಳ ಅನುಮತಿಗಳನ್ನು ಪಡೆಯುವ ಪ್ರಕ್ರಿಯೆಯನ್ನು ಸರಳಗೊಳಿಸುವ ಅಗತ್ಯವನ್ನು ಜನಪ್ರತಿನಿಧಿಗಳು ಪ್ರಸ್ತಾಪಿಸಿದರು.



ಶಾಸಕರಾದ ವಿ.ಸುನಿಲ್ ಕುಮಾರ್ ಅವರು ಕರಾವಳಿ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೂಡಿಕೆಗೆ ಉತ್ತೇಜನ ನೀಡಲು ಸಿಂಗಲ್ ವಿಂಡೋ ವ್ಯವಸ್ಥೆ ಕಲ್ಪಿಸುವಂತೆ ಸಲಹೆ ನೀಡಿದರು. ವಿವಿಧ ಅನುಮತಿಗಳು ಮತ್ತು ಇಲಾಖೆಗಳ ಸಮನ್ವಯಕ್ಕೆ ಸರಳ ವ್ಯವಸ್ಥೆ ರೂಪಿಸುವುದು ಹೊಸ ಹೂಡಿಕೆಗಳನ್ನು ಆಕರ್ಷಿಸಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

**ಪರಿಸರ ಹಾಗೂ ಅರಣ್ಯ ನಿಯಮಗಳ ಕುರಿತು ಚರ್ಚೆ**

ದಕ್ಷಿಣ ಕನ್ನಡ ಜಿಲ್ಲೆಯ ಉಸ್ತುವಾರಿ ಸಚಿವರಾದ ಯು.ಟಿ. ಖಾದರ್ ಅವರು ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮಕ್ಕೆ ಅಪಾರ ಅವಕಾಶಗಳಿದ್ದರೂ, ಅಖಬ, ಪರಿಸರ ಸೂಕ್ಷ್ಮ ವಲಯ ಹಾಗೂ ಅರಣ್ಯ ಇಲಾಖೆಗೆ ಸಂಬಂಧಿಸಿದ ವಿವಿಧ ನಿಯಮಗಳಿಂದಾಗಿ ಕೆಲವು ಪ್ರವಾಸೋದ್ಯಮ ಯೋಜನೆಗಳ ಅನುಷ್ಠಾನದಲ್ಲಿ ಸಮಸ್ಯೆಗಳು ಎದುರಾಗುತ್ತಿವೆ ಎಂದು ತಿಳಿಸಿದರು.

ಕರಾವಳಿ ಪ್ರದೇಶದ ಪರಿಸರ ಸಂರಕ್ಷಣೆಯನ್ನು ಖಚಿತಪಡಿಸಿಕೊಂಡೇ ಪ್ರವಾಸೋದ್ಯಮ ಅಭಿವೃದ್ಧಿಗೆ ಅನುಕೂಲವಾಗುವ ರೀತಿಯಲ್ಲಿ ಸಂಬಂಧಿತ ನಿಯಮಗಳು ಮತ್ತು ಅನುಮತಿ ಪ್ರಕ್ರಿಯೆಗಳನ್ನು ಪರಿಶೀಲಿಸುವ ಅಗತ್ಯವಿದೆ ಎಂದು ಅವರು ಸಲಹೆ ನೀಡಿದರು.

**ಪ್ರವಾಸೋದ್ಯಮ ಚಟುವಟಿಕೆಗಳಿಗೆ ಅನುಕೂಲಕರ ವಾತಾವರಣ**

ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ರಿಜ್ವಾನ್ ಅರ್ಷದ್ ಅವರು ಜಿಲ್ಲೆಯಲ್ಲಿ ಹೋಟೆಲ್‌ಗಳು ಹಾಗೂ ಪ್ರವಾಸೋದ್ಯಮ ಚಟುವಟಿಕೆಗಳನ್ನು ವಿಸ್ತರಿಸಲು ಅನುಕೂಲಕರ ವಾತಾವರಣ ನಿರ್ಮಿಸುವ ಅಗತ್ಯವನ್ನು ಪ್ರಸ್ತಾಪಿಸಿದರು. ಪ್ರವಾಸಿಗರ ಬೇಡಿಕೆ ಹಾಗೂ ಪ್ರವಾಸೋದ್ಯಮ ಚಟುವಟಿಕೆಗಳ ಸ್ವರೂಪವನ್ನು ಗಮನದಲ್ಲಿಟ್ಟುಕೊಂಡು ಕಾರ್ಯಾಚರಣೆಗೆ ಅಗತ್ಯವಿರುವ ಸಮಯ ಮತ್ತು ಸಂಬಂಧಿತ ವ್ಯವಸ್ಥೆಗಳ ಕುರಿತು ನೀತಿಯಲ್ಲಿ ಸೂಕ್ತ ಅವಕಾಶ ಕಲ್ಪಿಸುವಂತೆ ಸಲಹೆ ನೀಡಿದರು.

ಸಭೆಯಲ್ಲಿ ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿಗಳಾದ ಡಾ. ರಾಮ್ ಪ್ರಸಾತ್ ಮನೋಹರ್ ಕ್ಯಾ. ಬ್ರಿಜೇಶ್ ಚೌಟ, ಕೋಟ ಶ್ರೀನಿವಾಸ ಪೂಜಾರಿ, ವಿ. ಸುನಿಲ್ ಕುಮಾರ್, ಮಂಜುನಾಥ ಭಂಡಾರಿ, ಐವನ್ ಡಿಸೋಜಾ, ಹರೀಶ್ ಪೂಂಜಾ, ಉಮಾನಾಥ್ ಎ. ಕೋಟ್ಯಾನ್, ಭರತ್ ಶೆಟ್ಟಿ ವೈ., ಡಿ. ವೇದವ್ಯಾಸ ಕಾಮತ್, ರಾಜೇಶ್ ನಾಯಕ್ ಯು., ಭಾಗೀರಥಿ ಮುರುಳ್ಯ, ಅಶೋಕ್ ಕುಮಾರ್ ರೈ, ಗುರುರಾಜ್ ಶೆಟ್ಟಿ ಗಂಟಿಹೊಳೆ, ಎ. ಕಿರಣ್ ಕುಮಾರ್ ಕೊಡ್ಗಿ, ಯಶ್‌ಪಾಲ್ ಸುವರ್ಣ ಹಾಗೂ ಗುರ್ಮೆ ಸುರೇಶ್ ಶೆಟ್ಟಿ ಸೇರಿದಂತೆ ಜನಪ್ರತಿನಿಧಿಗಳು ಭಾಗವಹಿಸಿ ತಮ್ಮ ಕ್ಷೇತ್ರಗಳ ಪ್ರವಾಸೋದ್ಯಮ ಅಭಿವೃದ್ಧಿಗೆ ಸಂಬಂಧಿಸಿದ ಸಲಹೆಗಳನ್ನು ನೀಡಿದರು.

**ಸೆಪ್ಟೆಂಬರ್ 7ರೊಳಗೆ ಕರಡು ನೀತಿ**

ಸಭೆಯಲ್ಲಿ ವ್ಯಕ್ತವಾದ ಸಲಹೆಗಳನ್ನು ಪರಿಗಣಿಸಿ ಕರಡು ನೀತಿಯನ್ನು ಸಿದ್ಧಪಡಿಸಲಾಗುವುದು ಎಂದು ಸಚಿವ ಕೆ.ಜೆ.ಜಾರ್ಜ್ ಹೇಳಿದರು.

"ಕರಾವಳಿ ಮತ್ತು ಮಲೆನಾಡು ಕರ್ನಾಟಕದ ಪ್ರವಾಸೋದ್ಯಮದ ಪ್ರಮುಖ ಆಸ್ತಿಗಳಾಗಿವೆ. ಇಲ್ಲಿನ ಪ್ರವಾಸೋದ್ಯಮ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲು ಸ್ಥಳೀಯ ಅಗತ್ಯತೆಗಳು ಮತ್ತು ಜನಪ್ರತಿನಿಧಿಗಳ ಸಲಹೆಗಳನ್ನು ಒಳಗೊಂಡ ಸಮಗ್ರ ನೀತಿ ಅಗತ್ಯವಿದೆ. ಇಂದು ನಡೆದ ಸಭೆಯಲ್ಲಿ ಹಲವು ಪ್ರಮುಖ ಸಲಹೆಗಳು ಬಂದಿದ್ದು, ಅವುಗಳನ್ನು ಪರಿಶೀಲಿಸಿ ನೀತಿಯಲ್ಲಿ ಅಳವಡಿಸಲಾಗುವುದು. ಸೆಪ್ಟೆಂಬರ್ 7ರೊಳಗೆ ಕರಡು ನೀತಿಯನ್ನು ಸಿದ್ಧಪಡಿಸುವ ಗುರಿ ಹೊಂದಿದ್ದೇವೆ," ಎಂದು ಸಚಿವರು ತಿಳಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 145,